ಸಂಪುಟ : 9 ಸಂಚಿಕೆ 290 ಪುಟ : 4+2 ಬೆಲೆ: 3.00 ಮಂಗಳವಾರ ಡಿಸೆಂಬರ್ 31 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 290 Pages : 4+2 Price : 3.00 Tuesday December 31 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಜೈನ ಸಾಹಿತ್ಯ ಸಂಸ್ಕೃತಿ ಅಧ್ಯಯನ ಕೇಂದ್ರ ಸಲಹಾ ಸಮಿತಿ ಸದಸ್ಯರಾಗಿ ಡಾ. ಹಂಜೆ ನೇಮಕ



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಹುಲಕೋಟಿಯ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಇತಿಹಾಸ ವಿಭಾಗದ ಪ್ರಾಧ್ಯಾಪಕ ಮತ್ತು ಮುಖ್ಯಸ್ಥರಾದ ಡಾ. ಅಪ್ಪಣ್ಣ ಹಂಜೆ ಅವರನ್ನು ಹಂಪಿ ಕನ್ನಡ ವಿಶ್ವವಿದ್ಯಾಲಯದ ಜೈನ ಸಾಹಿತ್ಯ ಸಂಸ್ಕೃತಿ ಅಧ್ಯಯನ ಕೇಂದ್ರದ ತಜ್ಞರ ಸಲಹಾ ಸಮಿತಿಗೆ ಸದಸ್ಯರನ್ನಾಗಿ ಕುಲಪತಿಗಳು ಅನುಮೋದನೆ ಮಾಡಿದ್ದಾರೆ.

ಈ ಅಧಿಸೂಚನೆ ಹೊರಡಿಸಿದ ದಿನಾಂಕ 04-12-2024ರಿಂದ ಎರಡು ವರ್ಷಗಳವರೆಗೆ ಅಥವಾ ಮುಂದಿನ ಆದೇಶದವರೆಗೆ ಜಾರಿಯಲ್ಲಿರುತ್ತದೆ. ಡಾ. ಹಂಜೆ ಅವರನ್ನು ಕಾಲೇಜಿನ ಅಭಿವೃದ್ಧಿ ಸಮಿತಿಯ ಅಧ್ಯಕ್ಷರು ಮತ್ತು ಸದಸ್ಯರು, ಪ್ರಾಂಶುಪಾಲರು, ಬೋಧಕರು, ಬೋಧಕೇತರ ಸಿಬ್ಬಂದಿಗಳು, ವಿದ್ಯಾರ್ಥಿಗಳು, ಗದಗ ಜಿಲ್ಲಾ ದಿಗಂಬರ ಜೈನ ಸಂಘದ ಪದಾಧಿಕಾರಿಗಳು ಅಭಿನಂದಿಸಿದ್ದಾರೆ.

ಹಂಪಿ ಕನ್ನಡ ವಿಶ್ವವಿದ್ಯಾಲಯದ ಚರಿತ್ರೆ ಅಧ್ಯಯನ ವಿಭಾಗದಲ್ಲಿ 2015-16ನೇ ಸಾಲಿನಿಂದ ಬಾಹ್ಯ ಮಾರ್ಗದರ್ಶಕರಾಗಿ ವಿಶ್ವವಿದ್ಯಾಲಯದಿಂದ ಮಾನ್ಯತೆ ಪಡೆದ ಉಜಿರೆಯ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಕಾಲೇಜಿನ ಡಾ. ಹಾಮಾನಾ ಸಂಶೋಧನ ಕೇಂದ್ರದಲ್ಲಿ ಚರಿತ್ರೆ ವಿಷಯದಲ್ಲಿ ಪಿಎಚ್.ಡಿ. ಅಧ್ಯಯನಕ್ಕೆ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ಮಾಡುತ್ತಿದ್ದಾರೆ.

### ಎಳ್ಳ ಅಮವಾಸ್ಯೆ ಹಬ್ಬಕ್ಕೆ ಫೆಂಗಲ್ ಚಂಡಮಾರುತದ ಎಫೆಕ್ಟ್ | ಸಂಪ್ರದಾಯ ಬಿಡದ ರೈತ ಸಮುದಾಯ

# ಹಬ್ಬದ ಸಂಭ್ರಮ ಕಸಿದ ಚಂಡಮಾರುತ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮುಂಗಾರಿನಲ್ಲಿನ ಅಸಮರ್ಪಕ ಮಳೆಯಿಂದ ನಷ್ಟ ಅನುಭವಿಸಿದ ರೈತ ಸಮುದಾಯ ಹಿಂಗಾರಿನ ಪ್ರಾರಂಭದಲ್ಲಿ ಬಿತ್ತನೆಗೆ ಬಿಡುವು ಕೊಡದ ಮಳೆಯಿಂದ ಬಿತ್ತನೆಗೆ ಹಿನ್ನಡೆ, ಬಿತ್ತನೆಯಾದ ಬೆಳೆಗೆ ಹವಾಮಾನ ವೈಪರಿತ್ಯ, ಚಂಡಮಾರುತ, ಅಕಾಲಿಕ ಮಳೆ, ರೋಬಾಧೆಯಿಂದ ಜರ್ಝರಿತಗೊಂಡಿರುವ ರೈತ ಸಮುದಾಯ ಸೋಮವಾರ ಲಕ್ಷ್ಮೇಶ್ವರ ಸೇರಿ ತಾಲೂಕಿನ ಅಲ್ಲಲ್ಲಿ ಎಳ್ಳಾಮವಾಸ್ಯೆಯನ್ನು ಸಂಕ್ಷಿಪ್ತ ಮತ್ತು ಸಾಂಪ್ರದಾಯಿಕವಾಗಿ ಆಚರಿಸಿದರು.

ಉತ್ತರ ಕರ್ನಾಟಕದ ರೈತರು ಮುಂಗಾರಿನಲ್ಲಿ ಸೀಗೆ ಹುಣ್ಣಿಮೆ ಆಚರಿಸುವ ರೀತಿಯಲ್ಲಿ ಹಿಂಗಾರಿನ ಸಂಕ್ರಮಣ ಕಾಲದಲ್ಲಿ ಎಳ್ಳಾಮಾವಾಸ್ಯೆ ಆಚರಿಸುತ್ತಾರೆ. ಹಿಂಗಾರಿನಲ್ಲಿನ ಬೆಳೆಗಳು ತೆನೆ, ಕಾಯಿ ಕಟ್ಟಿ ಫಲ ಕೊಡುವ ಹಂತದಲ್ಲಿ ಭೂತಾಯಿಗೆ ಉಡಿ ತುಂಬಿ, ಧನ್ಯತೆಯ ಭಾವದೊಂದಿಗೆ ಪೂಜೆ ಸಲ್ಲಿಸುವ ಸಂಭ್ರಮದ ಹಬ್ಬ ಇದಾಗಿದೆ.



ಹಿಂಗಾರಿ ಬೆಳೆಗಳಾದ ಜೋಳ, ಕಡಲೆ, ಗೋದಿ, ಕುಸಬಿ ಬೆಳದ ಜಮೀನುಗಳಿಗೆ ಎತ್ತಿನ ಬಂಡಿ, ಟ್ರ್ಯಾಕ್ಟರ್, ಬೈಕ್, ಕಾರುಗಳಲ್ಲಿ ಹೋಗಿ ಭೂತಾಯಿಗೆ ಉಡಿ ತುಂಬಿ, ಪೂಜೆ ಮಾಡಿ, ಚರಗ ಚೆಲ್ಲುವ ಸಂಪ್ರದಾಯ ನೆರವೇರಿಸಲಾಗುತ್ತದೆ. ಬಳಿಕ ಹಬ್ಬಕ್ಕಾಗಿ ವಿಶೇಷವಾಗಿ ಸಿದ್ಧಪಡಿಸಲಾದ ಜೋಳದ ರೊಟ್ಟಿ, ಸಜ್ಜೆ ರೊಟ್ಟಿ, ಎಣಗಾಯಿ ಪಲ್ಲೆ, ಹೆಸರಕಾಳುಪಲ್ಲೆ, ಮಿಜ್ಜಿಹಿಂಡಿ, ಎಳ್ಳ ಹೋಳಿಗೆ, ಶೇಂಗಾ ಹೋಳಿಗೆ, ಕಡುಬು, ಕಿಚಡಿ ಹುಗ್ಗಿಯ ರುಚಿಯನ್ನು ಮನೆ ಮಂದಿ, ಬಂಧುಗಳು, ನೆರೆಹೊರಯವರೆಲ್ಲ ಸೇರಿ ಸವಿಭೋಜನ ಸವಿಯುತ್ತಾರೆ.

ಈ ನಡುವೆ ಬಂದ ಎಳ್ಳಮಾವಾಸ್ಯೆ ಹಬ್ಬವನ್ನು ಸಂಭ್ರಮದಿಂದ ಆಚರಿಸುವ ಉತ್ಸಾಹ, ಹುಮ್ಮಸ್ಸಿಲ್ಲದೇ ರೈತರು ಬೆಳಿಗ್ಗೆ ಜಮೀನಿಗೆ ತೆರಳಿ ಪೂಜೆ ಸಲ್ಲಿಸಿ ಬಂದಿದ್ದು ಸಾಮಾನ್ಯವಾಗಿತ್ತು. ಈ ನಡುವೆ ಒಂದಿಷ್ಟು ರೈತರು ಸಾಂಪ್ರದಾಯಿಕ ಹಬ್ಬದೂಟದೊಂದಿಗೆ ಹೊಲಕ್ಕೆ ತೆರಳಿ, ಮುತ್ತೈದೆಯರಿಗೆ ಉಡಿ ತುಂಬಿ ಸಹಭೋಜನ ಸವಿದು ಹಬ್ಬ ಆಚರಿಸಿದ್ದು ಕಂಡುಬಂದಿತು.

> ಮುಂಗಾರಿನಲ್ಲಿ ಮಳೆ ಕೊರತೆಯಿಂದ ಹೆಸರು, ಶೇಂಗಾ ಬೆಳೆ ಇಳುವರಿ ಕುಂಠಿತವಾಗಿ ನಷ್ಟ ಅನುಭವಿಸಿದ್ದೇವೆ. ಹಿಂಗಾರಿನ ಬೆಳೆಗಳು ಹುಲುಸಾಗಿ ಬೆಳೆದು ಉತ್ತಮ ಇಳುವರಿ ನಿರೀಕ್ಷೆಯಲ್ಲಿದ್ದೆವು. ಇತ್ತೀಚಿನ ಚಂಡಮಾರುತದಿಂದಾದ ಮೋಡದ ಹವಾಮಾನ ಮತ್ತು ಅಕಾಲಿಕ ಮಳೆಯಿಂದ ಬೆಳೆಗಳಿಗೆ ರೋಗಬಾಧೆ ಆವರಿಸಿ ನಿರೀಕ್ಷೆ ಹುಸಿಯಾಗಿದೆ. ಈ ನಡುವೆ ಸಂಪ್ರದಾಯ ಬಿಡಲಾಗದೇ ಎಳ್ಳ ಅಮವಾಸ್ಯೆಯಂದು ಹೊಲಕ್ಕೆ ಹೋಗಿ ಪೂಜೆ ಸಲ್ಲಿಸಿ ನಮ್ಮನ್ನು ಕಾಪಾಡು ತಾಯಿ ಎಂದು ಭೂತಾಯಿಗೆ ಬೇಡಿಕೊಳ್ಳುತ್ತಿದ್ದೇವೆ.
>
> **– ತಿಪ್ಪಣ್ಣ ಗೊಜನೂರ. ರೈತರು.**

ತಡವಾದ ಬಿತ್ತನೆಯ ನಡುವೆಯೂ ಉತ್ತಮ ಇಳುವರಿ ನಿರೀಕ್ಷೆಯಲ್ಲಿದ್ದ ರೈತರಿಗೆ ಅಕಾಲಿಕ ಮಳೆಯಿಂದ ಬರಸಿಡಿಲು ಬಡಿದಂತಾಗಿದೆ. ಕಳೆದ 8-10 ದಿನಗಳ ಹಿಂದಷ್ಟೇ ತಾಲೂಕಿನಾದ್ಯಂತ ಏಕಾಏಕಿ ಸುರಿದ ಅಕಾಲಿಕ ಮಳೆ, ಸೈಕ್ಲೋನ್ ಪರಿಣಾಮ ಕಾಳುಕಟ್ಟಿದ ಜೋಳದ ತೆನೆ ಕಪ್ಪಾಗಿದೆ. ಹೂ-ಕಾಯಿ ಭರಿತ ನೆಚ್ಚಿನ ಬೆಳೆ ಕಡಲೆಗೆ ಸೊರಗು ರೋಗ ಆವರಿಸಿದೆ. ಕುಸುಬಿ, ಗೋದಿ ಅಷ್ಟಕ್ಕಷ್ಟೇ ಎಂಬಂತಾಗಿದೆ. ವರ್ಷಪೂರ್ತಿ ಆಹಾರ ಧಾನ್ಯ ಮತ್ತು ಜಾನುವಾರುಗಳ ಮೇವಿನ ಕೊರತೆಯಿಂದ ಜೀವನ ನಡೆಸುವುದೇ ಕಷ್ಟವಾಗಲಿದೆ ಎಂಬ ಆತಂಕ ರೈತರನ್ನು ಕಾಡುತ್ತಿದೆ.





## 'ಸೇವಾ ಕಿರಣ' ಪ್ರಶಸ್ತಿ ಪ್ರದಾನ ಇಂದು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಹಿಂದೂ ಸೇವಾ ಪ್ರತಿಷ್ಠಾನ ಸೇವಾ ಮಿತ್ರ ಯೋಜನೆಯಿಂದ ಸೇವಾ ದಿನದ ಪ್ರಯುಕ್ತ ಡಿ.31ರ ಮಧ್ಯಾಹ್ನ 3ಕ್ಕೆ ಶಂಕರ ಭಾರತಿ ಕಲ್ಯಾಣ ಮಂಟಪದಲ್ಲಿ ವಿವಿಧ ಕ್ಷೇತ್ರಗಳಲ್ಲಿ ನಿಸ್ವಾರ್ಥ ಸೇವೆ ಸಲ್ಲಿಸಿದ ಮಹನೀಯರಿಗೆ 'ಸೇವಾ ಕಿರಣ ಪ್ರಶಸ್ತಿ' ಹಾಗೂ ವೃತ್ತಿ ತರಬೇತಿ ಪಡೆದ ಮಹಿಳೆಯರಿಗೆ ಪ್ರಮಾಣ ಪತ್ರಗಳನ್ನು ನೀಡಲಾಗುವುದು.

ಕಾರ್ಯಕ್ರಮಕ್ಕೆ ಅತಿಥಿಗಳಾಗಿ ಹಿಂದೂ ಸೇವಾ ಪ್ರತಿಷ್ಠಾನದ ರಾಜ್ಯ ನಿರ್ದೇಶಕ ಸುರೇಶ ಜಿ, ಹಿಂದೂ ಸೇವಾ ಪ್ರತಿಷ್ಠಾನದ ರಾಜ್ಯ ಸಂಯೋಜಕ ನಟರಾಜ ರಾನಡೆ, ಹೇಮಾ ಬಾಳಿಕಾಯಿ, ನಾಗರಾಜ ಶಿಗ್ಲಿ ಸೇರಿ ಹಲವು ಗಣ್ಯರು ಪಾಲ್ಗೊಳ್ಳುವರು ಎಂದು ಪ್ರತಿಷ್ಠಾನದ ಲಕ್ಷ್ಮೇಶ್ವರ ಘಟಕದ ಸಂಚಾಲಕ ಶಂಕರ ಬ್ಯಾಡಗಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಲಕ್ಷ್ಮೇಶ್ವರ ತಾಲೂಕಾ ಕಸಾಪ ವತಿಯಿಂದ ವಿಶ್ವಮಾನವ ದಿನಾಚರಣೆ

# ಕುವೆಂಪು ಜಗದ, ಯುಗದ ಕವಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಾಷ್ಟ್ರಕವಿ ಕುವೆಂಪುರವರು ಸಾಹಿತ್ಯದ ಮೂಲಕ ಮಾನವನನ್ನು ವಿಶ್ವ ಮಾನವನ್ನಾಗಿಸುವ ಕನ್ನಡದ ಶ್ರೇಷ್ಠ ಚಿಂತನೆಗಳಿಗೆ ಜಾಗತಿಕ ಸ್ಥಾನಮಾನ ಒದಗಿಸಿ ಕನ್ನಡತನವನ್ನು ಆಗಸದೆತ್ತರಕ್ಕೆ ಏರಿಸಿದವರು ಎಂದು ತಾಲೂಕಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಈಶ್ವರ ಮೆಡ್ಲೇರಿ ಹೇಳಿದರು.

ಅವರು ಲಕ್ಷ್ಮೇಶ್ವರ ತಾಲೂಕಾ ಕಸಾಪ ವತಿಯಿಂದ ಇಲ್ಲಿನ ಡಾ. ಬಿ.ಆರ್. ಅಂಬೇಡ್ಕರ್ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿ ನಿಲಯದಲ್ಲಿ ಹಮ್ಮಿಕೊಂಡಿದ್ದ ವಿಶ್ವಮಾನವ ದಿನಾಚರಣೆಯಲ್ಲಿ ಭಾಗವಹಿಸಿ ಮಾತನಾಡುತ್ತಿದ್ದರು.

ಜಗದ-ಯುಗದ ಕವಿ ಕುವೆಂಪು ಅವರು ತಮ್ಮ ಸಾಹಿತ್ಯದ ಮೂಲಕ ಕನ್ನಡ ಸಾರಸ್ವತ ಲೋಕವನ್ನು ಶ್ರೀಮಂತಗೊಳಿಸಿದ ಮೇರು ಶಿಖರವಾಗಿದ್ದಾರೆ. ಅವರು ನವೋದಯ ಸಾಹಿತ್ಯದ ಸಾಮಾಜಿಕ, ಸಾಂಸ್ಕೃತಿಕ, ಪ್ರಾಕೃತಿಕ ಮತ್ತು ವೈಚಾರಿಕ ಸಮಾಜದ ಎಲ್ಲ ರಂಗದ ವಿಮರ್ಶೆ ಮೂಲಕ ಸಮಾಜವನ್ನು ಜಾಗೃತವಾಗಿರುವ ಕಾರ್ಯ ಮಾಡಿದ್ದಾರೆ.




▸▸ 4ನೇ ಪುಟಕ್ಕೆ

ಸಮೂಹ ಸಂಪನ್ಮೂಲ ವ್ಯಕ್ತಿ ಉಮೇಶ ನೇಕಾರ ಮಾತನಾಡಿ, ವಿಶ್ವದ ಏಳಿಗೆಗೆ ವಿಶ್ವಮಾನವತೆಯ ಸಂದೇಶವೊಂದೇ ಪರಿಹಾರ. ಅಂತಹ ವಿಶ್ವಮಾನವತೆ ಸಂದೇಶ ಸಾರಿದ ಕುವೆಂಪು ನಮ್ಮ ಕನ್ನಡದ ಅಸ್ಮಿತೆಯಾಗಿದ್ದಾರೆ. ಕುವೆಂಪು ಕನ್ನಡದ ಶ್ರೇಷ್ಠ ಚಿಂತನೆಗಳಿಗೆ ಜಾಗತಿಕ ಸ್ಥಾನಮಾನ ಒದಗಿಸಿದವರು. ಕನ್ನಡತನವನ್ನು ಆಗಸದೆತ್ತರಕ್ಕೆ ಏರಿಸಿದವರು. ವಿಶೇಷವಾಗಿ ಸಮ-ಸಮಾಜದ ಇಂದಿನ ಅವಶ್ಯಕತೆಯನ್ನು ಸಾರಿ ಹೇಳಿದವರು. ಅವರ ಜನ್ಮ ಜಯಂತಿ ನಮ್ಮೆಲ್ಲರ ಜಾಗೃತಿ ಎಂದರು.


### ಜಿನ್ನಿಂಗ್ ಫ್ಯಾಕ್ಟರಿಗೆ ಬೆಂಕಿ

# ಲಕ್ಷಾಂತರ ಮೌಲ್ಯದ ಹತ್ತಿ ಭಸ್ಮ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬಿಸಿಎನ್ ಕಾಟನ್ ಜಿನ್ನಿಂಗ್ ಫ್ಯಾಕ್ಟರಿಯಲ್ಲಿ ಆಕಸ್ಮಿಕ ವಿದ್ಯುತ್ ಅವಘಡ ಸಂಭವಿಸಿದ್ದರಿಂದ ಮೌಲಾಸಾಬ ಗುಡಾರದ ಅವರಿಗೆ ಸೇರಿದ್ದ ಹಿಂದುಸ್ತಾನ್ ಟ್ರೇಡಿಂಗ್ ಕಂಪನಿಯ ಲಕ್ಷಾಂತರ ಮೌಲ್ಯದ ಹತ್ತಿಯು ಸುಟ್ಟು ಕರಕಲಾದ ಘಟನೆ ನಡೆದಿದೆ. ಸಂಗ್ರಹಿಸಿಡಲಾಗಿದ್ದ ನೂರಾರು ಕ್ವಿಂಟಲ್ ಹತ್ತಿಗೆ ಬೆಂಕಿ ಹೊತ್ತಿಕೊಂಡಿರುವ ವಿಷಯ ತಿಳಿದ ಪಟ್ಟಣದ ಅಗ್ನಿ ಶಾಮಕ ಠಾಣೆಯ ಸಿಬ್ಬಂದಿಗಳು ಸ್ಥಳಕ್ಕೆ ಆಗಮಿಸಿ ಬೆಂಕಿ ನಂದಿಸುವ ಕಾರ್ಯ ಮಾಡಿ ಹೆಚ್ಚಿನ ಹಾನಿ ಮತ್ತು ಅಪಾಯ ತಪ್ಪಿಸಿದರು.

ಲಕ್ಷ್ಮೇಶ್ವರ ಪಟ್ಟಣದಲ್ಲಿನ ಅಗ್ನಿ ಶಾಮಕ ಠಾಣೆಯಲ್ಲಿ ಬೆಂಕಿ ನಂದಿಸುವ ಕಾರ್ಯಕ್ಕೆ ಅಗತ್ಯವಿರುವ ದೊಡ್ಡ ಪ್ರಮಾಣದ ವಾಹನಗಳಲ್ಲದೆ ಸಣ್ಣ ವಾಹನ ಇರುವುದರಿಂದ ಲಕ್ಷ್ಮೇಶ್ವರ ತಾಲೂಕಿನಲ್ಲಿ ದೊಡ್ಡ ಮಟ್ಟದಲ್ಲಿ ಬೆಂಕಿ ಅವಘಡಗಳು ಸಂಭವಿಸಿದರೆ ಅದನ್ನು ನಂದಿಸುವ ಕಾರ್ಯ ಕಷ್ಟಸಾಧ್ಯವಾಗಿದೆ. ತಾಲೂಕಾ ಕೇಂದ್ರವಲ್ಲದೇ ಅನೇಕ ಜಿನ್ನಿಂಗ್ ಫ್ಯಾಕ್ಟರಿಗಳು, ಮಿಲ್, ಎಪಿಎಂಸಿ ಇರುವುದರಿಂದ ಸರ್ಕಾರ ಕೂಡಲೇ ದೊಡ್ಡ ವಾಹನಗಳನ್ನು ಅಗ್ನಿ ಶಾಮಕ ಠಾಣೆಗೆ ಒದಗಿಸುವ ಮೂಲಕ ಅಗ್ನಿ ಅವಘಡಗಳಿಂದಾಗುವ ಹಾನಿಯನ್ನು ನಿಯಂತ್ರಿಸಲು ಸಾಧ್ಯವಾಗುತ್ತದೆ ಎಂದು ಮಾಲತೇಶ ಜಿನ್ನಿಂಗ್ ಫ್ಯಾಕ್ಟರಿಯ ಮಾಲಕ ರಾಜಣ್ಣ ಹೊಳಲಾಪೂರ ಆಗ್ರಹಿಸಿದ್ದಾರೆ.



### ಒಡೆಯರ ಮಲ್ಲಾಪುರ ಮೊರಾರ್ಜಿ ವಸತಿ ಶಾಲೆ ವಿದ್ಯಾರ್ಥಿಗಳಿಗೆ ಹ್ಯಾಮ್ ತಂತ್ರಜ್ಞಾನದ ಬಗ್ಗೆ ವಿವರಣೆ

# ಶಿಕ್ಷಣದಲ್ಲಿ ಹ್ಯಾಮ್ ತಂತ್ರಜ್ಞಾನ ಉಪಯುಕ್ತ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ


ಹ್ಯಾಮ್ ಎಂಬುದು ರೇಡಿಯೊ ಆಧಾರಿತ ಸಂಪರ್ಕ ತಂತ್ರಜ್ಞಾನವಾಗಿದ್ದು, ಭೂಕಂಪ, ಪ್ರಾಕೃತಿಕ ವಿಕೋಪಗಳು ಸಂಭವಿಸಿದಾಗ, ಅರಣ್ಯ ಪ್ರದೇಶ, ಸಮುದ್ರ, ಆಕಾಶದಲ್ಲಿನ ಅವಘಡದ ತುರ್ತು ಸಂದರ್ಭದಲ್ಲಿ ಮೋಬೈಲ್‌ನಂತಹ ಇತರೇ ಸಂಪರ್ಕ ಸಾಧನಗಳು ಕಾರ್ಯನಿರ್ವಹಿಸದೇ ಇದ್ದಾಗ ಹ್ಯಾಮ್‌ಗಳು ನಿರ್ದಿಷ್ಟ ತರಾಂಗತರದಲ್ಲಿ ಮಾಹಿತಿಗಳನ್ನು ಪರಸ್ಪರ ಹಂಚಿಕೊಳ್ಳುತ್ತವೆ ಎಂದು ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಹ್ಯಾಮ್ ಸಂಸ್ಥೆಯ ನಿರ್ದೇಶಕ ಡಾ. ಎಸ್.ಸತ್ಯಪಾಲ್ ಹೇಳಿದರು.

ಅವರು ಸೋಮವಾರ ಸಮೀಪದ ಒಡೆಯರ ಮಲ್ಲಾಪುರ ಮೊರಾರ್ಜಿ ವಸತಿ ಶಾಲೆ ವಿದ್ಯಾರ್ಥಿಗಳಿಗೆ ಹ್ಯಾಮ್ ತಂತ್ರಜ್ಞಾನದ ಬಗ್ಗೆ ವಿವರಿಸಿ ಮಾತನಾಡಿದರು.

ಕೇಂದ್ರ ಸರಕಾರದ ಮಾಹಿತಿ ಮತ್ತು ತಂತ್ರಜ್ಞಾನ ಇಲಾಖೆಯ ಪರವಾನಗಿಯೊಂದಿಗೆ ರಾಜ್ಯ ಸರಕಾರದ ಯುವಜನ ಮತ್ತು ಕ್ರೀಡಾ ಸಬಲೀಕರಣ ಇಲಾಖೆ ಸಹಯೋಗದಲ್ಲಿ ಕಾರ್ಯನಿರ್ವಹಿಸುತ್ತಿದೆ. ವಿದ್ಯಾರ್ಥಿಗಳು ಹ್ಯಾಮ್ ಬಳಸಲು ಮೊದಲಿಗೆ ಲೈಸನ್ಸ್ ಪಡೆಯಬೇಕಾಗುತ್ತದೆ. ಲೈಸನ್ಸ್ ಪಡೆದುಕೊಂಡವರಿಗೆ ಕೋಡ್‌ವರ್ಡ್ ನೀಡಲಾಗುವುದು. ಈ ಕೋಡ್‌ವರ್ಡ್ ಮೂಲಕ ಇತರ ದೇಶಗಳಲ್ಲಿರುವ ಸಾಧಕರೊಂದಿಗೆ ಸುಲಭವಾಗಿ ಸಂಪರ್ಕ ಸಾಧಿಸಬಹುದು. ಅಗತ್ಯ ಸಂದರ್ಭದಲ್ಲಿ ಶಿಕ್ಷಕರು ವಿದ್ಯಾರ್ಥಿಗಳಿಗೆ ಪಠ್ಯ ಸಂಬಂಧಿತ ಮಾಹಿತಿ ಹಂಚಿಕೊಳ್ಳಬಹುದಾಗಿದೆ. ಮಕ್ಕಳ ಶಿಕ್ಷಣದಲ್ಲಿ ಹ್ಯಾಮ್ ತಂತ್ರಜ್ಞಾನ ಅತ್ಯಂತ ಉಪಯುಕ್ತವಾಗುತ್ತದೆ ಎಂದರು.

ಸಮಾಜ ಕಲ್ಯಾಣ ಇಲಾಖೆಯ ಕ್ರೈಸ್ ವಿಭಾಗದ ಹಿರಿಯ ಇಂಜಿನಿಯರ್ ಮಹಾದೇವ ಮಾತನಾಡಿ, ಬೋಧನೆ ಮತ್ತು ಕಲಿಕೆಯಲ್ಲಿ ಹ್ಯಾಮ್ ತಂತ್ರಜ್ಞಾನದ ಬಳಕೆ ಮಕ್ಕಳಿಗೆ ಪಾಠ ಕಲಿಯಲು ಸುಲಭವಾಗಲಿದೆ. ಹ್ಯಾಮ್ ತಂತ್ರಜ್ಞಾನದ ಸೌಲಭ್ಯಗಳ ಬಳಕೆಯಿಂದ ಕಲಿಕೆಯಲ್ಲಿ ವಿದ್ಯಾರ್ಥಿಗಳ ಭಾಗವಹಿಸುವಿಕೆ ಮತ್ತು ಪ್ರೇರಣೆಯನ್ನು ಹೆಚ್ಚಿಸುತ್ತದೆ. ಹ್ಯಾಮ್ ತಂತ್ರಜ್ಞಾನದ ಬಳಕೆಯಿಂದ ಇಂದು ಸಂವಹನ ಅತ್ಯಂತ ಸುಲಭವಾಗಿದೆ. ಹ್ಯಾಮ್ ಎಂಬ ರೇಡಿಯೊ ಆಧಾರಿತ ಸಂಪರ್ಕ ತಂತ್ರಜ್ಞಾನದ ಬಗ್ಗೆ ಶಾಲಾ-ಕಾಲೇಜುಗಳ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ರಾಜ್ಯದ ವಸತಿ ಶಾಲೆಗಳಲ್ಲಿ ಹ್ಯಾಮ್ ತಂತ್ರಜ್ಞಾನ ಅಳವಡಿಸಲಾಗುತ್ತಿದೆ ಎಂದರು.

ಈ ವೇಳೆ ಇಂಡಿಯನ್ ಇನ್‌ಸ್ಟಿಟ್ಯೂಟ್ ಸಂಸ್ಥೆಯ ಜಂಟಿ ನಿರ್ದೇಶಕ ವೆಂಕಟ್, ಪ್ರಾಚಾರ್ಯರು, ಶಿಕ್ಷಕ ವೃಂದ, ಸಿಬ್ಬಂದಿ, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.



ಹ್ಯಾಮ್ ತಂತ್ರಜ್ಞಾನ ಬಳಕೆಯ ಬಗ್ಗೆ ವಿದ್ಯಾರ್ಥಿಗಳಿಗೆ ಪ್ರಾತ್ಯಕ್ಷಿಕೆ ಮೂಲಕ ತಿಳಿಸಿದ ವಿಜ್ಞಾನ ಶಿಕ್ಷಕಿ ಎಂ.ಆಯ್. ಡಂಬಳ ಮಾತನಾಡಿ, ಮಕ್ಕಳಲ್ಲಿ ತಂತ್ರಜ್ಞಾನದ ಜ್ಞಾನ ಬೆಳೆಸಲು ಹ್ಯಾಮ್ ಸಹಕಾರಿಯಾಗಲಿದೆ. ಪೊಲೀಸ್ ಇಲಾಖೆಯಲ್ಲಿ ಬಳಸುವಂತಹ 6 ವಾಕಿಟಾಕಿಗಳುಳ್ಳ ಹ್ಯಾಮ್ ತಂತ್ರಜ್ಞಾನದ ಉಪಕರಣ ನಮ್ಮ ಶಾಲೆಯಲ್ಲಿ ಅಳವಡಿಸಿರುವುದು ಸಂತಸ ತಂದಿದೆ ಎಂದರು.

## ಸಂಪಾದಕೀಯ

# ಹೊಸ ವರ್ಷ ಎಂದರೆ ಕೇವಲ ಕ್ಯಾಲೆಂಡರ್ ಬದಲಿಸುವುದಲ್ಲ

ಸಿಹಿ ಕಹಿ ಘಟನೆಗಳಿಗೆ ಸಾಕ್ಷಿಯಾದ 2024ಕ್ಕೆ ಈಗ ವಿದಾಯ ಹೇಳುವ ಸಮಯ. ಕಳೆದ ವರ್ಷದಲ್ಲಿ ನಾಡಿನಲ್ಲಾದ ಬೆಳವಣಿಗೆಗಳು, ಪ್ರಮುಖ ಘಟನಾವಳಿಗಳ ಆತ್ಮಾವಲೋಕನ ಮಾಡಿಕೊಂಡು, 2025ಕ್ಕೆ ಪಾದಾರ್ಪಣೆ ಮಾಡಬೇಕಾದ ಸುಸಂದರ್ಭ.

ಹೊಸ ವರ್ಷ ಎಂದರೆ ಮನೆಯಲ್ಲಿನ ಕ್ಯಾಲೆಂಡರ್ ಬದಲಾಗುವುದು ಸಹಜ. ಆದರೆ ಕ್ಯಾಲೆಂಡರ್ ಬದಲಾಯಿಸುವುದು ಅಷ್ಟೇ ಅಲ್ಲ. ಡಿಸೆಂಬರ್ 31ರ ರಾತ್ರಿ ಕುಡಿದು ಕುಪ್ಪಳಿಸುವುದು ಅಲ್ಲ. ಸ್ನೇಹಿತರೊಂದಿಗೆ ಕೇಕ್ ಕತ್ತರಿಸಿ ಪಟಾಕಿ ಸಿಡಿಸಿ, ರಸ್ತೆ ತುಂಬೆಲ್ಲ ಹೊಸ ವರ್ಷದ ಶುಭಾಶಯಗಳು ಎಂದು ಬಣ್ಣ ಬಳಿಯುವುದೂ ಅಲ್ಲ.

ಹೊಸ ವರ್ಷ ಎಂದರೆ ಹೊಸ ಆಲೋಚನೆಗಳು ಮೊಳಕೆ ಒಡೆಯಬೇಕು. ಹೊಸ ಚಿಂತನೆಗಳು ಸೃಷ್ಟಿಯಾಗಬೇಕು. ಹೊಸ ನಿರ್ಧಾರಗಳನ್ನು ಮಾಡಬೇಕು. ಅದು ಕೇವಲ ಒಂದೇ ದಿನಕ್ಕೆ ಸೀಮಿತವಾಗುವ ನಿರ್ಧಾರಗಳಾಗಿರಬಾರದು ಎನ್ನುವ ಬಗ್ಗೆಯೂ ಎಚ್ಚರಿಕೆ ವಹಿಸಬೇಕು.

ಬಹುತೇಕರು ಹೊಸ ವರ್ಷದ ನಂತರ ಮದ್ಯ ಸೇವನೆ ಬಿಡುತ್ತೇನೆ, ಸಿಗರೇಟ್ ಸೇದುವುದನ್ನು ಬಿಡುತ್ತೇನೆ, ಪ್ರತಿನಿತ್ಯ ಜಿಮ್ ಗೆ ಹೋಗುತ್ತೇನೆ, ಮಾಂಸಹಾರ ಬಿಡುತ್ತೇನೆ, ಸಿನಿಮಾ ನೋಡುವುದನ್ನ ಬಿಡುತ್ತೇನೆ ಎನ್ನುವಂಥ ನಿರ್ಧಾರಗಳನ್ನು ಕೈಗೊಳ್ಳುತ್ತಾರೆ. ಇವೆಲ್ಲ ಹೊಸ ವರ್ಷವನ್ನ ಸ್ವಾಗತಿಸುವ ಸಂದರ್ಭದಲ್ಲಿ ಇನ್ನೊಬ್ಬರನ್ನು ಅನುಕರಣೆ ಮಾಡಿ ತೆಗೆದುಕೊಳ್ಳುವ ನಿರ್ಧಾರಗಳು. ಹೀಗಾಗಿ ಅವು ಕಾರ್ಯರೂಪಕ್ಕೆ ಬರುವುದಿಲ್ಲ.

ಇಂತಹ ಹುಚ್ಚು ನಿರ್ಧಾರಗಳ ಬದಲಾಗಿ, 2025 ರಲ್ಲಿ ಕನಿಷ್ಠ ಒಂದು ಪುಸ್ತಕವನ್ನಾದರೂ ಓದಿ ಮುಗಿಸುವ ನಿರ್ಧಾರ ಮಾಡಬೇಕು. ಒಂದು ಹೊಸ ಸ್ಥಳಕ್ಕೆ ಭೇಟಿ ನೀಡುವ ನಿರ್ಧಾರ, ಇಡೀ ವರ್ಷದಲ್ಲಿ ಕನಿಷ್ಠ ಮೂವರಿಗೆ ಸಹಾಯ ಮಾಡುವ ನಿರ್ಧಾರ ಮಾಡಿದರೆ, ಭವಿಷ್ಯದ ವರ್ಷಗಳು ಇನ್ನಷ್ಟು ಸಮೃದ್ಧವಾಗಿ, ಸಂತೃಪ್ತವಾಗಿ ಬದುಕಲು ಸಾಧ್ಯ. ಕಾರ್ಯರೂಪಕ್ಕೆ ಬರುವ ಇಂಥ ನಿರ್ಧಾರಗಳನ್ನು ಕೈಗೊಂಡು ಹೊಸ ವರ್ಷವನ್ನು ಬರಮಾಡಿಕೊಳ್ಳೋಣ.

## ಜನ ಜಾಗೃತಿ ಸಮಾರೋಪ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಮಾನವೀಯ ಮೌಲ್ಯವಿಲ್ಲದ ಜೀವನ ನಿರರ್ಥಕ

**■ವಿಜಯಸಾಕ್ಷಿ ಸುದ್ದಿ, ತುಮಕೂರು**

ಮಾನವ ಯಾವಾಗಲೂ ಸುಖಾಪೇಕ್ಷಿ. ಆದರ್ಶ ಮೌಲ್ಯಗಳ ಪರಿಪಾಲನೆಯಿಂದ ಬದುಕು ಉಜ್ವಲಗೊಳ್ಳುತ್ತದೆ. ಪ್ರತಿಯೊಬ್ಬ ವ್ಯಕ್ತಿಗೂ ಆಹಾರ, ಆರೋಗ್ಯ ಮತ್ತು ಆಧ್ಯಾತ್ಮ ಅವಶ್ಯಕವಾಗಿವೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಭಾನುವಾರ ನಗರದ ಶ್ರೀ ವಿಶಾಲಾಕ್ಷಮ್ಮ ಸದಾಶಿವಯ್ಯ ಸಭಾಭವನದಲ್ಲಿ ಶ್ರೀ ಜಗದ್ಗುರು ಪಂಚಾಚಾರ್ಯ ಸೇವಾ ಟ್ರಸ್ಟಿನ ಆಶ್ರಯದಲ್ಲಿ ಜರುಗಿದ ಜನ ಜಾಗೃತಿ ಸಮಾರೋಪ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಕೋಟಿ ಹಣ ಇದ್ದರೇನು, ಮಾನವೀಯ ಮೌಲ್ಯವಿಲ್ಲದ ಜೀವನ ನಿರರ್ಥಕ. ಜೀವನ ಎಂಬುದು ಕೇವಲ ಹಣದಿಂದ ಸಾಗುವ ದೋಣಿಯಲ್ಲ. ಅದಕ್ಕೆ ಮಾನವೀಯತೆ ಎಂಬ ನಾವಿಕ ಮತ್ತು ದಾನ-ಧರ್ಮ ಎಂಬ ಹುಟ್ಟು ಅವಶ್ಯಕ. ಜ್ಞಾನದಿಂದ ಅಧಿಕಾರ ಸಿಗಬಹುದು. ಆದರೆ ಗೌರವ ಸಿಗಬೇಕೆಂದರೆ ವ್ಯಕ್ತಿತ್ವ ಇರಬೇಕು. ಅನುಭವ ಜಗತ್ತಿನ ಶ್ರೇಷ್ಠ ಶಿಕ್ಷಕ. ಉಸಿರಿರುವವರೆಗೂ ಜ್ಞಾನಾರ್ಜನೆಯೇ ಜೀವನದ ಗುರಿಯಾಗಿರಬೇಕು. ಯಾರು ಎಷ್ಟೇ ತುಳಿದರೂ ಗರಿಕೆ ಕೆಲ ಕ್ಷಣಗಳಲ್ಲಿ ಮೊದಲಿನ ಸ್ಥಿತಿಗೆ ಬರುತ್ತದೆ. ಅದು ಯಾವತ್ತೂ ಬೇಸರಿಸಿಕೊಳ್ಳುವುದಿಲ್ಲ ಮತ್ತು ಎದ್ದು ನಿಲ್ಲುವುದನ್ನು ಮರೆಯುವುದಿಲ್ಲ.



ಮನುಷ್ಯನ ಮನೋಭಾವವು ಗರಿಕೆಯಂತಿರಬೇಕು. ಮೂಕನ ಮಾತು ಬೇಗ ಅರ್ಥ ಮಾಡಿಕೊಳ್ಳಬಹುದು. ಆದರೆ ಮುಖವಾಡ ಧರಿಸಿ ಹಿಂದೆ ಮಾತನಾಡುವವರ ಮಾತುಗಳನ್ನು ಅರ್ಥ ಮಾಡಿಕೊಳ್ಳುವುದು ಕಷ್ಟವಾಗುತ್ತದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಉಜ್ವಲ ಬದುಕಿಗೆ ಜೀವನ ದರ್ಶನದ ಅರಿವನ್ನು ಬೋಧಿಸಿ ಸನ್ಮಾರ್ಗಕ್ಕೆ ಕರೆತಂದ ಘಟನೆಗಳನ್ನು ಕಾಣಬಹುದು. ತುಮಕೂರು ನಗರದಲ್ಲಿ ಹಮ್ಮಿಕೊಂಡ ಧನುರ್ಮಾಸದ ಪೂಜಾ ಹಾಗೂ ಸಮಾರಂಭಗಳು ತಮಗೆ ತೃಪ್ತಿ ತಂದಿವೆ ಎಂದರು.

ಮಾಜಿ ಸಚಿವ ಸೊಗಡು ಶಿವಣ್ಣ, ಎ.ಎಸ್. ಸೋಮಶೇಖರ, ಬಿ.ಎಸ್. ಮಂಜುನಾಥ, ಗಂಗಾಧರ ಶಾಸ್ತ್ರಿಗಳು ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು. ಎಸ್.ಶ್ರೀಧರ, ಡಿ.ಎಂ.ರಾಜಶೇಖರ್, ಸಿದ್ಧಪ್ಪ, ರೇಣುಕಾ ಪರಮೇಶ್, ರಾಜೇಶ್ವರಿ ರುದ್ರಪ್ಪ, ನಳಿನಾ ಶಿವಾನಂದ ಮೊದಲಾದ ಗಣ್ಯರು ಶ್ರೀ ರಂಭಾಪುರಿ ಜಗದ್ಗುರುಗಳಿಂದ ಗುರುರಕ್ಷೆ ಸ್ವೀಕರಿಸಿದರು. ಚಿಂತಕ ಪ್ರಶಾಂತ ರಿಪ್ಪನ್‌ಪೇಟೆ ಅವರು 'ಶ್ರೀ ಜಗದ್ಗುರು ಪಂಚಾಚಾರ್ಯ ಪಂಚಸೂತ್ರ' ಕುರಿತು ಸುದೀರ್ಘ ಉಪನ್ಯಾಸ ನೀಡಿದರು. ಇದೇ ಸಂದರ್ಭದಲ್ಲಿ ಶ್ರೀ ರಂಭಾಪುರಿ-ಶ್ರೀ ಕೇದಾರ ಜಗದ್ಗುರುಗಳ ಸಾನ್ನಿಧ್ಯದಲ್ಲಿ ಈಚನೂರ ಗ್ರಾಮದಲ್ಲಿ ಫೆಬ್ರುವರಿ ತಿಂಗಳಲ್ಲಿ ಜರುಗುವ ಸಮಾರಂಭದ ಆಮಂತ್ರಣ ಪತ್ರಿಕೆ ಬಿಡುಗಡೆ ಮಾಡಲಾಯಿತು.

ದೊಡ್ಡಗುಣಿ ಹಿರೇಮಠದ ರೇವಣಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳು ಉಪದೇಶಾಮೃತವನ್ನಿತ್ತರು. ಅಂಕನಹಳ್ಳಿ ಗವಿಮಠದ ಶಿವರುದ್ರ ಶಿವಾಚಾರ್ಯ ಸ್ವಾಮಿಗಳು ಉಪಸ್ಥಿತರಿದ್ದರು. ನೇತೃತ್ವ ವಹಿಸಿದ ಸಿದ್ಧರಬೆಟ್ಟದ ವೀರಭದ್ರ ಶಿವಾಚಾರ್ಯ ಸ್ವಾಮಿಗಳು ವೀರಶೈವ ಧರ್ಮ ಸಂಸ್ಕೃತಿ ಗುರು ಪರಂಪರೆಯ ಮಹತ್ವ ವಿಚಾರಗಳನ್ನು ಪ್ರಸ್ತಾಪಿಸಿದರು. ವೈ.ಕೆ. ಜ್ಯೋತಿ ಸ್ವಾಗತಿಸಿದರು. ಪೂರ್ಣಿಮಾ ಪ್ರಕಾಶ ನಿರೂಪಿಸಿದರು.

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ರಾಜ್ಯಾಧ್ಯಕ್ಷರಾದ ಶಂಕರ ಬಿದರಿ ಮಾತನಾಡಿ, ವೀರಶೈವ ಧರ್ಮದ ಸಂಸ್ಕೃತಿ ಬೆಳೆದುಬಂದ ಪರಂಪರೆ ಅಪೂರ್ವ. ಆಚಾರ್ಯರ ಮತ್ತು ಶರಣರ ಪರಿಶ್ರಮದಿಂದಾಗಿ ಸಕಲ ಜೀವಾತ್ಮರಿಗೆ ಒಳಿತನ್ನೇ ಬಯಸುತ್ತಾ ಬಂದಿದೆ. ವೀರಶೈವ ಧರ್ಮದಲ್ಲಿ ನೂರಾರು ಒಳಪಂಗಡ ಭೇದ-ಭಾವನೆಯಿಂದಾಗಿ ಸಂಘಟನೆ ನಿರೀಕ್ಷಿತ ಮಟ್ಟದಲ್ಲಿ ನಡೆಯುತ್ತಿಲ್ಲ. ಒಳ ಪಂಗಡ ಮರೆತು ಎಲ್ಲರೂ ಒಗ್ಗಟ್ಟಿನಿಂದ ಬಾಳುವ ಅವಶ್ಯಕತೆ ಇದೆಯೆಂದರು.

# ದರಪಟ್ಟಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ಪಂಚಾಯತ್ ಅನಿರ್ಬಂಧಿತ ಅನುದಾನದಡಿಯಲ್ಲಿ ವಸತಿ ಶಾಲೆ/ ವಸತಿ ನಿಲಯಗಳ ಗ್ರಂಥಾಲಯಗಳಿಗೆ ಪುಸ್ತಕ ಖರೀದಿಸಲು ಅರ್ಹ ಸರಬರಾಜುದಾರರಿಂದ ದರಪಟ್ಟಿಯನ್ನು ಆಹ್ವಾನಿಸಲಾಗಿದೆ.

ಆಸಕ್ತಿಯುಳ್ಳ ಪೂರೈಕೆದಾರರು ದಿನಾಂಕ 6-1-2025 ರ ಮಧ್ಯಾಹ್ನ 3 ಗಂಟೆಯೊಳಗಾಗಿ ( ರಜೆ ದಿನಗಳನ್ನು ಹೊರತುಪಡಿಸಿ) ದರಪಟ್ಟಿಯನ್ನು ಸಲ್ಲಿಸತಕ್ಕದ್ದು. ದರ ನಮೂದಿಸುವಾಗ ಸಾಗಾಣಿಕೆ ವೆಚ್ಚ ಹಾಗೂ ತೆರಿಗೆ ಒಳಗೊಂಡಂತೆ ದರವನ್ನು ನಮೂದಿಸುವುದು. ದರಪಟ್ಟಿಯನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಗದಗ ಇವರ ಹೆಸರಿನಲ್ಲಿ ನೀಡತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಪಂಚಾಯತಿಯ ಮುಖ್ಯ ಯೋಜನಾಧಿಕಾರಿಗಳ ಮೊಬೈಲ್ ಸಂಖ್ಯೆ 9480865004 ನ್ನು ಸಂಪರ್ಕಿಸಬಹುದಾಗಿದೆ ಎಂದು ಜಿ.ಪಂ. ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

# ನಾಳೆ ಅಯ್ಯಪ್ಪಸ್ವಾಮಿ ಮಹಾಪೂಜೆ

**■ವಿಜಯಸಾಕ್ಷಿ ಸುದ್ದಿ, ಹುಲಕೋಟಿ**

ಹುಲಕೋಟಿಯ ತತ್ವಮಸಿ ಶ್ರೀ ಅಯ್ಯಪ್ಪ ಸ್ವಾಮಿ ಸನ್ನಿಧಿಯ ಭಕ್ತ ವೃಂದ ಮತ್ತು ಹುಲಕೋಟಿಯ ಕೆ ಎಚ್ ಪಾಟೀಲ ಗ್ರಾಮ ಹಿತಾಭಿವೃದ್ಧಿ ಸಂಘದ ವತಿಯಿಂದ ಗ್ರಾಮದ ಕೆ.ಎಚ್ ಪಾಟೀಲ ಸಮುದಾಯ ಭವನದಲ್ಲಿ ದಿ. 01/01/2025 ರಂದು ಬುಧವಾರ ರಾತ್ರಿ 8.00 ಗಂಟೆಗೆ ಶ್ರೀ ಅಯ್ಯಪ್ಪ ಸ್ವಾಮಿಯ ಮಹಾಪೂಜೆ ಮತ್ತು ಮಹಾ ಮಂಗಳಾರತಿ ಕಾರ್ಯಕ್ರಮ ಜರುಗಲಿದೆ. ನಂತರ ಅನ್ನಪ್ರಸಾದ ಸಂತರ್ಪಣಾ ಕಾರ್ಯಕ್ರಮ ನೆರವೇರಲಿದೆ.

ಈ ಮಹಾಪೂಜೆಯಲ್ಲಿ ಪಾಲ್ಗೊಳ್ಳಲು ಗ್ರಾಮಸ್ಥರಿಗೆ ಸಂಘಟಿಕರು ಮನವಿ ಮಾಡಿದ್ದಾರೆ.

# ಮುಖ್ಯವಾಹಿನಿಗೆ ಬನ್ನಿ : ನಕ್ಸಲರಿಗೆ ಸಿಎಂ ಸಿದ್ದರಾಮಯ್ಯ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ನಕ್ಸಲೀಯ ಚಟುವಟಿಕೆಗಳಲ್ಲಿ ತೊಡಗಿರುವವರು ಶರಣಾಗಿ ಮುಖ್ಯವಾಹಿನಿಗೆ ಬರಬೇಕೆಂದು ನಮ್ಮ ಸರ್ಕಾರವು ಬಯಸುತ್ತದೆ ಎಂದು ಸಿಎಂ ಸಿದ್ದರಾಮಯ್ಯ ಅವರು ಹೇಳಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, "ನಕ್ಸಲೀಯರು ಪ್ರಜಾತಾಂತ್ರಿಕತೆಯ ಮುಖ್ಯವಾಹಿನಿಗೆ ಬರಬೇಕೆಂದು ಪ್ರತಿಪಾದಿಸುವ ಹಾಗೂ ಜೀವಹಾನಿಯು ಯಾವ ಕಡೆಯು ನಡೆಯಬಾರದು ಎಂದು ಬಯಸುವ ವಿವಿಧ ಪ್ರಗತಿಪರ ಹಾಗೂ ಜನಪರ ವೇದಿಕೆಗಳ ಹಲವಾರು ಮುಖಂಡರು ನನ್ನನ್ನು ಭೇಟಿ ಮಾಡಿರುತ್ತಾರೆ" ಎಂದು ತಿಳಿಸಿದ್ದು, ಕರ್ನಾಟಕದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡಲು ಮತ್ತು ಶಾಂತಿ ನೆಲೆಸುವಂತೆ ಮಾಡಲು ಸರ್ಕಾರವು ಕಟ್ಟುನಿಟ್ಟಿನ ಕ್ರಮಕೈಗೊಳ್ಳಲು ಹಿಂಜರಿಯುವುದಿಲ್ಲ ಎಂದು ಹೇಳಿದ್ದಾರೆ.

ನಕ್ಸಲೀಯರು ಮುಖ್ಯವಾಹಿನಿಗೆ ಬರಲು ಮಾತುಕತೆ ನಡೆಸಲು ಮುಂದಾಗಿದ್ದರೆ, ಈ ಪ್ರಕ್ರಿಯೆಯನ್ನು ಸರ್ಕಾರ ಕಾನೂನಿನ ಚೌಕಟ್ಟಿನಲ್ಲಿ ಸ್ವಾಗತಿಸಿ, ಸಹಾನುಭೂತಿಯಿಂದ ನಡೆದುಕೊಳ್ಳುತ್ತದೆ ಎಂದು ಅವರು ತಿಳಿಸಿದ್ದಾರೆ.


ನಕ್ಸಲೀಯ ಚಟುವಟಿಕೆಗಳು ಕರ್ನಾಟಕದಲ್ಲಿ ಎಂದೂ ನೆರೆಯ ರಾಜ್ಯಗಳಂತೆ ವಿಪರೀತ ಪ್ರಮಾಣದಲ್ಲಿ ನಡೆದಿಲ್ಲ. ಆದರೆ, ಮಲೆನಾಡಿನಲ್ಲಿ ಎರಡು ದಶಕಗಳಿಂದ ಆಗಾಗ್ಗೆ ನಕ್ಸಲೀಯ ಚಟುವಟಿಕೆಗಳು ಕಾಣುತ್ತಲಿವೆ ಮತ್ತು ಆ ಕಾರಣದಿಂದ ಹಿಂಸೆ ಹಾಗೂ ಸಾವು-ನೋವುಗಳು ಸಂಭವಿಸಿವೆ ಎಂದು ಹೇಳಿದ್ದಾರೆ.

ಹಲವಾರು ಅಮಾಯಕರ, ಪೊಲೀಸರ ಮತ್ತು ನಕ್ಸಲೀಯ ಚಟುವಟಿಕೆಗಳಲ್ಲಿ ಇದ್ದವರ ಜೀವಹಾನಿಯೂ ಆಗಿದೆ. ಆದರೆ, ಪ್ರಜಾತಾಂತ್ರಿಕ ಸಮಾಜದಲ್ಲಿ ಬಂದೂಕಿನ ಮೂಲಕ ಬದಲಾವಣೆ ತರಲು ಹೊರಟಿರುವ ಆದರ್ಶವಾದಿಗಳು ತಮ್ಮ ಜೀವವನ್ನೂ ತೆತ್ತುಕೊಳ್ಳುತ್ತಾರೆ, ಇತರರ ಜೀವಹಾನಿಗೂ ಕಾರಣವಾಗುತ್ತಾರೆ.

# ಜಿಲ್ಲಾಡಳಿತದಲ್ಲಿ ವಿಶ್ವ ಮಾನವ ದಿನಾಚರಣೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಇವರ ಸಹಯೋಗದಲ್ಲಿ ರಾಷ್ಟ್ರಕವಿ ಕುವೆಂಪು ಜನ್ಮದಿನದ ನಿಮಿತ್ಯಯ ವಿಶ್ವ ಮಾನವ ದಿನಾಚರಣೆಯನ್ನು ರವಿವಾರ ಗದಗ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಆಚರಿಸಲಾಯಿತು.



ನರಗುಂದ ಶಾಸಕ ಸಿ.ಸಿ.ಪಾಟೀಲ, ವಿಧಾನ ಪರಿಷತ್ ಶಾಸಕರಾದ ಎಸ್.ವಿ.ಸಂಕನೂರ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಂ. ಬಿ ಸಂಕದ ಅವರು ರಾಷ್ಟ್ರಕವಿ ಕುವೆಂಪು ಅವರ ಭಾವಚಿತ್ರಕ್ಕೆ ಪುಷ್ಪನಮನ ನೆರವೇರಿಸಿ ಗೌರವ ಸಲ್ಲಿಸಿದರು.

ದೇಶದ ಮಾಜಿ ಪ್ರಧಾನಮಂತ್ರಿಗಳಾದ ಡಾ.ಮನಮೋಹನ ಸಿಂಗ್ ಅವರ ನಿಧನದಿಂದಾಗಿ ಶೋಕಾಚರಣೆ ಜಾರಿ ಇರುವ ಹಿನ್ನೆಲೆಯಲ್ಲಿ, ರಾಷ್ಟ್ರಕವಿ ಕುವೆಂಪು ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಗೌರವ ಸಲ್ಲಿಸಿ, ದಿನಾಚರಣೆಯನ್ನು ಸರಳವಾಗಿ ಆಚರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕ ವಸಂತ ಬಿ ಮಡ್ಲೂರ, ಜಿಲ್ಲಾಧಿಕಾರಿಗಳ ಕಚೇರಿಯ ಶಿರಸ್ತೇದಾರ ಮಹೇಶ ಕರಡಿಗುಡ್ಡ, ರಾಜಕುಮಾರ ಸೊಪಡ್ಲ ಸೇರಿದಂತೆ ಮತ್ತಿತರು ಹಾಜರಿದ್ದರು.

# ಬೆಳೆಗಳ ವಿವರಗಳನ್ನು ಬೆಳೆ ಸಮೀಕ್ಷೆ ಆ್ಯಪ್‌ನಲ್ಲಿ ದಾಖಲಿಸುವುದು ಕಡ್ಡಾಯ

**■ವಿಜಯಸಾಕ್ಷಿ ಸುದ್ದಿ, ಗದಗ**

2024-25ನೇ ಸಾಲಿನ ಹಿಂಗಾರು ಹಂಗಾಮಿನ ಬೆಳೆ ಸಮೀಕ್ಷೆ ಈಗಾಗಲೇ ಪ್ರಾರಂಭವಾಗಿದ್ದು, ರೈತರು ತಾವು ಬೆಳೆದ ಬೆಳೆಗಳ ವಿವರಗಳನ್ನು ತಾವೇ ಖುದ್ದಾಗಿ ಗೂಗಲ್ ಪ್ಲೇಸ್ಟೋರ್‌ನಿಂದ "ಹಿಂಗಾರು ರೈತರ ಬೆಳೆ ಸಮೀಕ್ಷೆ 2024" ನ್ನು ಡೌನ್‌ಲೋಡ್ ಮಾಡಿಕೊಂಡು ಬೆಳೆ ವಿವರಗಳನ್ನು ದಾಖಲಿಸಬೇಕಾಗಿದೆ.

ಹೀಗೆ ವಿವರಗಳನ್ನು ದಾಖಲಿಸುವದರಿಂದ ರೈತರಿಗೆ ಕನಿಷ್ಠ ಬೆಂಬಲ ಬೆಲೆ ಯೋಜನೆ, ಬೆಳೆ ವಿಮೆ ಯೋಜನೆ, ಬರಗಾಲ ಮತ್ತು ಪ್ರವಾಹ ಸಂದರ್ಭದಲ್ಲಿ ನಷ್ಟ ಪರಿಹಾರ ಪಡೆಯಲು, ಪಹಣಿಯಲ್ಲಿ ಬೆಳೆ ವಿವರಗಳನ್ನು ದಾಖಲಿಸಲು ಮತ್ತು ಬೆಳೆಸಾಲ ಪಡೆಯುವಲ್ಲಿ ರೈತರಿಗೆ ಅನುಕೂಲವಾಗುವದರಿಂದ ಎಲ್ಲ ರೈತರು ಬೆಳೆ ವಿವರಗಳನ್ನು ತ್ವರಿತವಾಗಿ ಬೆಳೆ ಸಮೀಕ್ಷೆ ಆ್ಯಪ್‌ನಲ್ಲಿ ದಾಖಲಿಸಿ ಇದರ ಸದುಪಯೋಗ ಪಡೆದುಕೊಳ್ಳಬೇಕಿದೆ.

ರೈತರು ಬೆಳೆ ವಿವರಗಳನ್ನು ಅಪ್‌ಲೋಡ್ ಮಾಡದಿದ್ದಲ್ಲಿ ಮೇಲೆ ತಿಳಿಸಿದ ಸರ್ಕಾರದ ಯೋಜನೆಗಳ ಲಾಭದಿಂದ ವಂಚಿತರಾಗುವ ಸಾಧ್ಯತೆ ಇರುವುದರಿಂದ ರೈತರು ಇದನ್ನು ಗಂಭೀರವಾಗಿ ಪರಿಗಣಿಸಿ ತುರ್ತಾಗಿ ವಿವರಗಳನ್ನು ದಾಖಲಿಸಬೇಕೆಂದು ಜಂಟಿ ಕೃಷಿ ನಿರ್ದೇಶಕರಾದ ತಾರಾಮಣಿ ಜಿ. ಹೆಚ್. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ರೈತರು ತಮ್ಮ ಗ್ರಾಮದ ಖಾಸಗಿ ನಿವಾಸಿಗಳು, ಕಂದಾಯ/ಕೃಷಿ/ತೋಟಗಾರಿಕೆ/ರೇಷ್ಮೆ ಇಲಾಖೆಗಳ ಅಧಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ.

# ಮದ್ಯ ಮಾರಾಟ ಮಳಿಗೆ ಬೇಡ: ಜಿಲ್ಲಾಧಿಕಾರಿಗೆ ಮನವಿ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಸೂರಣಗಿ ಗ್ರಾಮದಲ್ಲಿ ಮದ್ಯ ಮಾರಾಟ ಮಳಿಗೆ ಪರವಾನಿಗೆ ನೀಡುವುದರಿಂದ ಸಾರ್ವಜನಿಕರ ಹಿತದೃಷ್ಟಿಯಿಂದ ಜನರ ಆರೋಗ್ಯ ಹಾಗೂ ಮಾನಸಿಕ ನೆಮ್ಮದಿ ಹದಗೆಡುವುದಲ್ಲದೇ ಅನೇಕ ಕುಟುಂಬಗಳು ಬೀದಿಗೆ ಬರುತ್ತವೆ. ಮನೆ-ಮನೆಗಳಲ್ಲಿ ಹೊಡೆದಾಟ, ಜಗಳ ಹೆಚ್ಚುತ್ತವೆ. ಅಪ್ರಾಪ್ತ ವಯಸ್ಸಿನ ಯುವಕರು ಕುಡಿದ ಅಮಲಿನಲ್ಲಿ ತಮ್ಮ ತಂದೆ-ತಾಯಿಯನ್ನು ಲೆಕ್ಕಿಸದೇ ಅವಾಚ್ಯ ಶಬ್ದಗಳಿಂದ ಬೈದಾಡುವುದು, ಹೊಡೆಯುವುದು ಹೀಗೆ ಅನೇಕ ಅನಾಹುತಗಳು ಸಂಭವಿಸುತ್ತವೆ. ಆದ್ದರಿಂದ ಜಿಲ್ಲಾಧಿಕಾರಿಗಳು ಅಬಕಾರಿ ಆಯುಕ್ತರು ಸಾರ್ವಜನಿಕ ಹಿತಾಸಕ್ತಿಯನ್ನು ಕಾಪಾಡಲು ಮುಂದಾಗಬೇಕು ಎಂದು ಆಗ್ರಹಿಸಿ ತಾಲೂಕಾ ಜಯ ಕರ್ನಾಟಕ ಸಂಘಟನೆಯಿಂದ ಜಿಲ್ಲಾಧಿಕಾರಿ ಗೋವಿಂದ ರೆಡ್ಡಿ ಅವರಿಗೆ ಮನವಿ ಸಲ್ಲಿಸಿ ಒತ್ತಾಯಿಸಲಾಯಿತು.



ಒಂದು ವೇಳೆ ಮಳಿಗೆಗೆ ಪರವಾನಿಗೆ ನೀಡಿದ್ದೇ ಆದಲ್ಲಿ ನಮ್ಮ ಸಂಘಟನೆಯೊಂದಿಗೆ ಊರಿನ ಜನರೊಂದಿಗೆ ಜಿಲ್ಲಾಧಿಕಾರಿಗಳ ಕಛೇರಿಯ ಮುಂಭಾಗದಲ್ಲಿ ಧರಣಿ ಹಮ್ಮಿಕೊಳ್ಳುತ್ತೇವೆ ಎಂದು ಎಚ್ಚರಿಸಿದ್ದಾರೆ.

ಈ ವೇಳೆ ರಮೇಶ ಹಂಗನಕಟ್ಟಿ, ಭಾಷಾಸಾಬ್ ಮಲ್ಲಸಮುದ್ರ, ನಾಗರಾಜ್ ಕ್ಷತ್ರಿಯ, ರುದ್ರಗೌಡ ಪಾಟೀಲ, ಸಂತೋಷ ಬಡಕಲ್, ಸಚಿನ ಮೇಲ್ಮುರಿ, ಬಸವರಾಜ ಮೇಲ್ಮುರಿ, ಅಬ್ದುಲ್ ಖಾದರ್ ಕೊಪ್ಪಳ, ವೀರಭದ್ರಯ್ಯ ಮಠಪತಿ, ಹೊನ್ನಪ್ಪ ದನಕಟ್ಟವರ, ಪ್ರದೀಪ ಬಳಿಗಾರ, ಫಕ್ಕಿರೇಶ ಅರಳಿ, ಫಕ್ಕಿರೇಶ ಶ ಇಟಗಿ, ಮಹೇಶ ಬಳಿಗಾರ, ಪುಟ್ಟಪ್ಪ ಹರಿಜನ, ಚಂದ್ರಶೇಖರ ಸರಸೂರಿ, ಶಿವಪುತ್ರಪ್ಪ ಲಮಾಣಿ, ಗಣೇಶ ಹುಲ್ಲೂರ, ಗಂಗಾಧರ ಹಡಪದ, ಹಾಲಪ್ಪ ಭಂಡಾರಿ ಸೇರಿದಂತೆ ಅನೇಕರು ಇದ್ದರು.

# ಪಠ್ಯದೊಂದಿಗೆ ಪಠ್ಯೇತರ ಚಟುವಟಿಕೆಗಳಿಗೂ ಒತ್ತು

**■ವಿಜಯಸಾಕ್ಷಿ ಸುದ್ದಿ, ಡಂಬಳ**

ಮಕ್ಕಳ ಶೈಕ್ಷಣಿಕ ಪ್ರಗತಿಯಲ್ಲಿ ಶಿಕ್ಷಕರೊಂದಿಗೆ ಪಾಲಕರ ಪಾತ್ರವೂ ಮಹತ್ವದ್ದು. ಬಡ ಮಕ್ಕಳ ಶಿಕ್ಷಣಕ್ಕೆ ಅನುಕೂಲ ಕಲ್ಪಿಸಲು ಸರ್ಕಾರ ಹಲವು ಯೋಜನೆಗಳನ್ನು ರೂಪಿಸಿದ್ದು, ಸರ್ಕಾರದ ಸೌಲಭ್ಯಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ನಿಲಯ ಪಾಲಕ ಎಸ್.ಎ. ಯಲ್ಲರಡ್ಡಿ ಹೇಳಿದರು.

ಡಂಬಳ ಗ್ರಾಮದ ಡಿ. ದೇವರಾಜ ಅರಸು ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯದಲ್ಲಿ ರವಿವಾರ ಜರುಗಿದ ಪಾಲಕರ ಸಭೆ, ಶೈಕ್ಷಣಿಕ ಚಟುವಟಿಕೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.




ಮಕ್ಕಳ ಸರ್ವಾಂಗೀಣ ವಿಕಾಸಕ್ಕೆ ಪಠ್ಯದ ಜತೆಗೆ ಪಠ್ಯೇತರ ಚಟುವಟಿಕೆಗಳು ಅವಶ್ಯವಾಗಿದ್ದು, ಆ ನಿಟ್ಟಿನಲ್ಲಿ ವಸತಿ ಶಾಲೆಯಲ್ಲಿ ಪಠ್ಯದ ಜತೆಗೆ ಪಠ್ಯೇತರ ಚಟುವಟಿಕೆಗಳಿಗೂ ಒತ್ತು ನೀಡಲಾಗುತ್ತಿದೆ ಎಂದು ಹೇಳಿದರು.

ಪ್ರೊ. ಆರ್.ಎಮ್. ದೊಡ್ಡಮನಿ, ಶಿಕ್ಷಕ ಆನಂದ ಆರ್ ಮಾತನಾಡಿ, ಮಕ್ಕಳ ಭವಿಷ್ಯಕ್ಕಾಗಿ ಗುರುಗಳ ಮತ್ತು ಪಾಲಕರ ನಿರಂತರ ಜವಾಬ್ದಾರಿ ಬಹಳ ಮುಖ್ಯ. ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡವ ಹಂಬಲತೆಯ ಮೂಲಕ ಉತ್ತಮ ಭವಿಷ್ಯ ನಿರೂಪಿಸಿಕೊಳ್ಳಲು ಶ್ರಮಿಸಬೇಕು ಎಂದು ಹೇಳಿದರು.

ವಸತಿ ನಿಲಯ ಸಿಬ್ಬಂದಿ ಈರಣ್ಣ ಬೂದಿಹಾಳ, ವಿಟ್ಟಲ್ ನಾವಳ್ಳಿ, ಪಾಲಕ ದಾನಯ್ಯ ಬೇನಾಳ ಮಾತನಾಡಿದರು. ಕಾರ್ಯಕ್ರಮದಲ್ಲಿ ಶರಣಪ್ಪ ಶಂಸಿ, ಈರಪ್ಪ ಕೊರವರ, ನಿಂಗಪ್ಪ ಕುರಿ, ಸುಜಾತಾ ಬೆಳ್ಳಟ್ಟಿ, ಸುದಾ ಬಡಗೇರ, ರೇಣುಕಾ ಪೂಜಾರ ಸೇರಿದಂತೆ ಪಾಲಕರು, ವಿದ್ಯಾರ್ಥಿಗಳು ಇದ್ದರು.

# ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

2024-25ನೇ ಸಾಲಿನಲ್ಲಿ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಖೇಲೋ ಇಂಡಿಯಾ ಸೈಕ್ಲಿಂಗ್ ಕೇಂದ್ರ ತೆರೆಯಲು ಆಯುಕ್ತರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬೆಂಗಳೂರು ಇವರ ಆದೇಶದಲ್ಲಿ ತಿಳಿಸಿದ್ದು, ಗದಗ ಜಿಲ್ಲಾ ಖೇಲೋ ಇಂಡಿಯಾ ಸೈಕ್ಲಿಂಗ್ ಕೇಂದ್ರಕ್ಕೆ ತರಬೇತಿ ನೀಡಲು ಹಾಗೂ ಕ್ರೀಡಾಪಟುಗಳಿಗೆ ತರಬೇತಿ ನೀಡಲು ಸೈಕ್ಲಿಂಗ್ ತರಬೇತುದಾರರ ಹುದ್ದೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಖೇಲೋ ಇಂಡಿಯಾ ಸೈಕ್ಲಿಂಗ್ ಕೇಂದ್ರಕ್ಕೆ ಒಬ್ಬ ತರಬೇತುದಾರರ ಅವಶ್ಯಕತೆ ಇದ್ದು, ಒಂದು ವರ್ಷದ ಅವಧಿಗೆ ಗುತ್ತಿಗೆ ಆಧಾರದ ಮೇಲೆ ಆಯ್ಕೆ ಸಮಿತಿಯು ತರಬೇತುದಾರರನ್ನು ಆಯ್ಕೆ ಮಾಡಲಿದ್ದು, ಸದರಿ ತರಬೇತುದಾರರು ಅಂತಾರಾಷ್ಟ್ರೀಯ, ರಾಷ್ಟ್ರೀಯ ಮಟ್ಟದ ಸೈಕ್ಲಿಂಗ್ ಸ್ಪರ್ಧೆಯಲ್ಲಿ ಭಾಗವಹಿಸಿ ಪದಕ ವಿಜೇತರಾದವರಿಗೆ ಹಾಗೂ ಗದಗ ಜಿಲ್ಲೆಯವರಿಗೆ ಆದ್ಯತೆ ನೀಡಲಾಗುವುದು.

ಖೇಲೋ ಇಂಡಿಯಾ ತರಬೇತುದಾರರ ಹುದ್ದೆಗೆ ಈ ಕೆಳಕಂಡ ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು . ಸೈಕ್ಲಿಂಗ್ ಕ್ರೀಡೆಯಲ್ಲಿ ಓಖಖ ಮಾಡಿದವರಿಗೆ ಹಾಗೂ ಗದಗ ರಹವಾಸಿಗಳಿಗೆ ಪ್ರಥಮ ಆದ್ಯತೆ ನೀಡಲಾಗುವುದು.

ದಾಖಲೆಗಳನ್ನು ಪರಿಶೀಲಿಸಿ, ಜಿಲ್ಲಾ ಮಟ್ಟದ ಸಮಿತಿಯಿಂದ ನಡೆಸಲಾದ ಸಂದರ್ಶನದ ಮೂಲಕ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು.

ಒಂದು ವರ್ಷದ ಅವಧಿಗೆ ಗೌರವ ಸಂಭಾವನೆ ಆಧಾರದ ಮೇಲೆ ಆಯ್ಕೆ ಮಾಡಿಕೊಳ್ಳಲಾಗುವುದು. ಅರ್ಹ ಅಭ್ಯರ್ಥಿಗಳು ದಿ: 06-01-2025 ರ ಒಳಗಾಗಿ ಅರ್ಜಿಯನ್ನು ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣ, ಗದಗ ಇಲ್ಲಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣ, ದೂರವಾಣಿ ಸಂಖ್ಯೆ 08372-238345 ಇಲ್ಲಿ ನಿಗದಿತ ಅರ್ಜಿ ಪಡೆದು ಭರ್ತಿ ಮಾಡಿ ಖುದ್ದಾಗಿ ಸಲ್ಲಿಸಲು ಪ್ರಕಟಣೆ ತಿಳಿಸಿದೆ

## ವಾರ್ಷಿಕ ಸ್ನೇಹ ಸಮ್ಮೇಲನ ಇಂದು

**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಪಟ್ಟಣದ ಎಸ್‌ಜೆಜೆಎಂ ಸಂಯುಕ್ತ ಪದವಿಪೂರ್ವ ಮಾಹಾವಿದ್ಯಾಲಯದ 2024/25ನೇ ಸಾಲಿನ ವಾರ್ಷಿಕ ಸ್ನೇಹ ಸಮ್ಮೇಲನ ಡಿ.31ರ ಬೆಳಿಗ್ಗೆ 10.30ಕ್ಕೆ ಬಾಲಲೀಲಾ ಮಾಹಾಂತ ಶಿವಯೋಗಿಗಳ ಕಲಾ ಭವನದಲ್ಲಿ ಜರುಗಲಿದೆ.

ದಿವ್ಯ ಸಾನ್ನಿಧ್ಯವನ್ನು ಡಾ.ಮಲ್ಲಿಕಾರ್ಜುನ ಮಾಹಾಸ್ವಾಮೀಜಿ, ಅಧ್ಯಕ್ಷತೆಯನ್ನು ಬಾಲಲೀಲಾ ಮಾಹಾಂತ ಶಿವಯೋಗಿ ಶಿಕ್ಷಣ ಸಮಿತಿಯ ಅಧ್ಯಕ್ಷ ಎಂ.ಡಿ. ಬಟ್ಟೂರ, ಮುಖ್ಯ ಅತಿಥಿಗಳಾಗಿ ಸಾಹಿತಿ ಹಾಗೂ ವಿಶ್ರಾಂತ ಪ್ರಾಧ್ಯಾಪಕರಾದ ಡಾ.ಶ್ಯಾಮಸುಂದರ ಬಿದರಕುಂದಿ, ಧಾರವಾಡ ಟಿಪ್ಪಿ ಕಲಾವಿದ ಅನಂತ ದೇಶಪಾಂಡೆ, ಗಣ್ಯ ವರ್ತಕ ಶಿವಾನಂದ ದಳವೆ ಭಾಗವಹಿಸುವರೆಂದು ಪ್ರಾಚಾರ್ಯ ಎ.ಎಂ. ಅಂಗಡಿ ಪ್ರಕಟಣೆಗೆ ತಿಳಿಸಿದ್ದಾರೆ.

## ಇಂದು ವಿದ್ಯುತ್ ವ್ಯತ್ಯಯ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

110 ಕೆವಿ ಲಕ್ಷ್ಮೇಶ್ವರ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕಾರ್ಯ ಕೈಗೊಳ್ಳುವುದರಿಂದ ಡಿ.31ರಂದು ಮುಂಜಾನೆ 9ರಿಂದ ಸಂಜೆ 6 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ.

110 ಕೆವಿ ಲಕ್ಷ್ಮೇಶ್ವರ ಉಪಕೇಂದ್ರದಿಂದ ಪೂರೈಕೆಯಾಗುವ 33ಕೆವಿ ಎಂಎಂಸಿಎಲ್ ಗಾಳಿಯಂತ್ರ ಘಟಕ, 33 ಕೆವಿ ಸೋಮೇಶ್ವರ ಸಿನ್ನಿಂ ಮಿಲ್, ವಿನ್ಸಾಲ್ ಸೋಲಾರ್, ಮವ್‌ಯಥೊ ಸೋಲಾರ್, ಎಲ್ಲಾ ನಗರ ಮತ್ತು ಗ್ರಾಮೀಣ ಪ್ರದೇಶಗಳ 110 ಕೆವಿ ವಿತರಣಾ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಹೆಸ್ಕಾಂ ಪ್ರಕಟಣೆ ತಿಳಿಸಿದೆ.

## ನೀರಲ್ಲಿ ಮುಳುಗಿ ಇಬ್ಬರ ಸಾವು

**■ವಿಜಯಸಾಕ್ಷಿ ಸುದ್ದಿ, ಉಡುಪಿ**

ಜಿಲ್ಲೆಯ ಹೆಜಮಾಡಿಯಲ್ಲಿ ಸ್ನಾನಕ್ಕೆ ತೆರಳಿದ್ದ ಇಬ್ಬರು ಯುವಕರು ನೀರುಪಾಲಾಗಿದ್ದಾರೆ. ಅಮವಾಸ್ಯೆಯ ದಿನದಂದು ಉಡುಪಿ ಜಿಲ್ಲೆಯ ಕಾಪು ತಾಲೂಕಿನ ಹೆಜಮಾಡಿಯಲ್ಲಿ ಸಮುದ್ರಕ್ಕೆ ಸ್ನಾನ ಮಾಡಲು ತೆರಳಿದ ವೇಳೆ ಅವಘಡ ಸಂಭವಿಸಿದೆ. ಸಮುದ್ರಕ್ಕೆ ಈಜಲು ತೆರಳಿದ್ದ 6 ಜನರ ಪೈಕಿ ಇಬ್ಬರು ನೀರಿನಲ್ಲಿ ಮುಳುಗಿ ಮೃತಪಟ್ಟಿದ್ದಾರೆ.

ಅಕ್ಷಯ್ ಮತ್ತು ಚಿರಾಗ್ ಅಮೀನ್ ಮೃತರು. ಸಮುದ್ರದಲ್ಲಿ ಮುಳುಗುತ್ತಿದ್ದ 6 ಜನರನ್ನು ರಕ್ಷಿಸಲು ಸ್ಥಳೀಯರು ಮುಂದಾಗಿದ್ದರು. ಈ ಪೈಕಿ ನಾಲ್ವರನ್ನು ರಕ್ಷಣೆ ಮಾಡಲಾಗಿದೆ. ಇನ್ನುಳಿದ ಇಬ್ಬರನ್ನು ರಕ್ಷಿಸಲು ಯತ್ನಿಸಿದರೂ ಆ ಪ್ರಯತ್ನ ಫಲಪ್ರದವಾಗಲಿಲ್ಲ. 6 ಯುವಕರಲ್ಲಿ ನಾಲ್ಕು ಜನರನ್ನು ಮಾತ್ರ ಕಾಪಾಡಲು ಸಾಧ್ಯವಾಯಿತು.

### ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ಪೂರ್ವಭಾವಿ ಸಭೆ

# ಸಮ್ಮೇಳನದ ಯಶಸ್ಸಿಗೆ ಸಕಲ ಸಿದ್ಧತೆಗಳಾಗಲಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ವತಿಯಿಂದ 2025ರ ಜನವರಿ ಅಥವಾ ಫೆಬ್ರವರಿ ತಿಂಗಳಿನಲ್ಲಿ ಏರ್ಪಡಿಸಲಾಗುವ 'ರಾಜ್ಯಮಟ್ಟದ ಪ್ರಪ್ರಥಮ ಸಮ್ಮೇಳನ'ವನ್ನು ಅದ್ಧೂರಿಯಾಗಿ ಆಚರಣೆ ಮಾಡಬೇಕಿದೆ. ಸಮ್ಮೇಳನದ ಯಶಸ್ಸಿಗೆ ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಬೇಕೆಂದು ಸಂಘದ ರಾಜ್ಯಾಧ್ಯಕ್ಷ ಎ.ಸಿ. ತಿಪ್ಪೇಸ್ವಾಮಿ ಸಂಘದ ಗದಗ ಜಿಲ್ಲಾ ಘಟಕದ ಪದಾಧಿಕಾರಿಗಳಿಗೆ ಮನವಿ ಮಾಡಿದರು.

ನಗರದ ಪ್ರವಾಸಿ ಮಂದಿರದಲ್ಲಿ ಕರೆಯಲಾಗಿದ್ದ ಸಂಘದ ರಾಜ್ಯ ವಿಶೇಷ ಕಾರ್ಯಕಾರಿಣಿ ಸಭೆ ಮತ್ತು ಸಮ್ಮೇಳನದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡುತ್ತಿದ್ದರು.

ಗದಗ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಈ ಸಮ್ಮೇಳನ ನಡೆಯಲಿದೆ. ಸಮ್ಮೇಳನದ ಉದ್ಘಾಟನೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಮಾಡಲಿದ್ದಾರೆ. ಈಗಾಗಲೇ ಸಂಘದ ನಿಯೋಗ ಕಾನೂನು ಸಚಿವರಾದ ಹೆಚ್.ಕೆ. ಪಾಟೀಲ್ ಅವರ ನೇತೃತ್ವದಲ್ಲಿ ಡಿಸೆಂಬರ್ 12ರಂದು ಬೆಳಗಾವಿಯ ಸುವರ್ಣಸೌಧದಲ್ಲಿ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ಸಮ್ಮೇಳನದ ಉದ್ಘಾಟಕರಾಗಿ ಆಗಮಿಸುವಂತೆ ಮನವಿ ಮಾಡಲಾಗಿದೆ. ಸಮ್ಮೇಳನಕ್ಕೆ ಬರುವುದಾಗಿ ಮತ್ತು ಸಮ್ಮೇಳನದ ದಿನಾಂಕ ನೀಡುವುದಾಗಿ ನಿಯೋಗಕ್ಕೆ ಮುಖ್ಯಮಂತ್ರಿಯವರು ಭರವಸೆ ನೀಡಿದ್ದಾರೆಂದು ತಿಳಿಸಿದರು.



ಸಮ್ಮೇಳನದ ಅಂಗವಾಗಿ 100–150 ಪುಟಗಳ ಬಹುವರ್ಣದ ಸ್ಮರಣ ಸಂಚಿಕೆಯನ್ನು ಹೊರತರಲಾಗುವುದು. ಜನವರಿ 15ರೊಳಗೆ ಲೇಖನಗಳನ್ನು ಮತ್ತು ಜಾಹೀರಾತುಗಳನ್ನು ಕಳುಹಿಸಿಕೊಡುವಂತೆ ಸಂಘದ ಜಿಲ್ಲಾ ಘಟಕಗಳ ಅಧ್ಯಕ್ಷರು ಮತ್ತು ಪದಾಧಿಕಾರಿಗಳಿಗೆ ತಿಳಿಸಿದ ರಾಜ್ಯಾಧ್ಯಕ್ಷರು, ಸಂಘದ ವತಿಯಿಂದ ಹಮ್ಮಿಕೊಳ್ಳಲಾಗಿರುವ ಪ್ರಪ್ರಥಮ ಸಮ್ಮೇಳನ ಅದ್ಧೂರಿಯಾಗಿ ಜರುಗಲು ಪ್ರತಿಯೊಬ್ಬರೂ ನಿಷ್ಠೆಯಿಂದ ಕಾರ್ಯ ನಿರ್ವಹಿಸಬೇಕೆಂದು ವಿನಂತಿಸಿದರು.

ಸ್ಮರಣ ಸಂಚಿಕೆಯನ್ನು ಸ್ಥಳೀಯವಾಗಿ ಮುದ್ರಣ ಮಾಡಲಾಗುವುದು. ಸ್ಮರಣ ಸಂಚಿಕೆಯು ಅದ್ಭುತವಾಗಿ ಮೂಡಿಬರಲಿದೆ ಎಂದು ತಿಳಿಸಿದರು. ಸಮ್ಮೇಳನವನ್ನು ಎರಡು ದಿನಗಳ ಬದಲಿಗೆ ಒಂದು ದಿನ ಮಾತ್ರ ಏರ್ಪಡಿಸಲು ನಿರ್ಣಯಿಸಿದ್ದು, ಅದಕ್ಕೆ ಸಭೆ ಒಪ್ಪಿಗೆ ನೀಡುವಂತೆ ಕೋರಿದಾಗ, ಸಭೆಯು ಅದಕ್ಕೆ ಸಮ್ಮತಿ ನೀಡಿತು.

ಸಮ್ಮೇಳನದ ರೂಪುರೇಷೆಗಳ ಕುರಿತು ಕೇಂದ್ರ ಸಂಘದ ಪದಾಧಿಕಾರಿಗಳು ಮತ್ತು ಜಿಲ್ಲಾ ಘಟಕಗಳ ಅಧ್ಯಕ್ಷರು, ಪದಾಧಿಕಾರಿಗಳು ಸಲಹೆ ಸೂಚನೆಗಳನ್ನು, ಅಭಿಪ್ರಾಯಗಳನ್ನು ಸಭೆಯಲ್ಲಿ ಮಂಡಿಸಿದರು.

ಸಭೆಯಲ್ಲಿ ರಾಜ್ಯ ಉಪಾಧ್ಯಕ್ಷರಾದ ಭೀಮರಾಯ ಹದ್ದಿನಾಳ, ಹರೀಶ್, ಪ್ರಧಾನ ಕಾರ್ಯದರ್ಶಿ ಟಿ.ಎಸ್. ಕೃಷ್ಣಮೂರ್ತಿ, ಖಜಾಂಚಿ ಎಸ್.ಟಿ. ವೇದಮೂರ್ತಿ, ಕಾರ್ಯದರ್ಶಿ ನರಸಿಂಹರಾಜು ಹೆಚ್., ಜಂಟಿ ಕಾರ್ಯದರ್ಶಿಗಳಾದ ದಿನೇಶ್ ಗೌಡಗೆರೆ, ರಘುವೀರ ನಾಯಕ, ಸಿ.ರಂಗನಾಥ, ಸಂಘಟನಾ ಕಾರ್ಯದರ್ಶಿಗಳಾದ ರಾಜು ತಳವಾರ, ರಮೇಶ್ ರೆಡ್ಡಿ, ನಾಮನಿರ್ದೇಶನ ಸದಸ್ಯರಾದ ಡಾ. ಬಿ.ವಾಸುದೇವ್, ಅಶೋಕ ಕುಮಾರ ಕರಂಜಿ, ಡಾ.ಮಲ್ಲಿಕಾರ್ಜುನ ಅಶನಾಳ, ಕಾರ್ಯದರ್ಶಿ ನವೀನ್, ಸದಸ್ಯರಾದ ಭಾಗ್ಯಲಕ್ಷ್ಮೀ ಆರ್., ಜಿಲ್ಲಾ ಘಟಕಗಳ ಅಧ್ಯಕ್ಷರಾದ ಸುರೇಶ್ ಆರ್. ಕುಣೆಬೆಳಕೆರೆ, ಜಗದೀಶ ಪೂಜಾರ, ಎಂ.ಜೆ. ಶ್ರೀನಿವಾಸ್, ಶಿವಶಂಕರ್ ಎಲ್, ವಿಜಯ ಕುಮಾರ ಪಾಟೀಲ, ಗದಗ ಜಿಲ್ಲಾ ಪ್ರಧಾನ ಕಾರ್ಯದರ್ಶಿ ದೇವಪ್ಪ ಲಿಂಗದಾಳ, ಪದಾಧಿಕಾರಿಗಳಾದ ಹೆಚ್.ಎಂ. ಷರೀಫನವರ್, ಅಜಿತ್ ಹೊಂಬಾಳೆ, ಎನ್.ಆರ್. ಭಾಂಡಗೆ, ರಾಜು ಹೆಬ್ಬಳ್ಳಿ ಸೇರಿದಂತೆ ರಾಜ್ಯ ಹಾಗೂ ಜಿಲ್ಲಾ ಘಟಕಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

ದಾವಣಗೆರೆ ಪಬ್ಲಿಕ್ ವಾಯ್ಸ್ ಪತ್ರಿಕೆಯ ವರದಿಗಾರರು ಮತ್ತು ಕವಿಗಳಾದ ಎಸ್. ಆರೋಕ್ಯಸ್ವಾಮಿ ಹಾಸ್ಯ ಕವನ ವಾಚನ ಮಾಡಿದರು. ಇದೇ ಸಂದರ್ಭದಲ್ಲಿ ಕಿತ್ತೂರು ಕರ್ನಾಟಕ ಪ್ರಾದೇಶಿಕ ಪತ್ರಿಕೆ ಮತ್ತು ಪ್ರಜಾಪರ್ವ ಪತ್ರಿಕೆಯ 2025ನೇ ಸಾಲಿನ ಕ್ಯಾಲೆಂಡರ್ ಬಿಡುಗಡೆಗೊಳಿಸಲಾಯಿತು.

ಗದಗ ಜಿಲ್ಲಾ ಘಟಕದ ಖಜಾಂಚಿ ರವಿಕಾಂತ ಅಂಗಡಿ ಸ್ವಾಗತಿಸಿ, ನಿರೂಪಿಸಿ, ಕೊನೆಯಲ್ಲಿ ವಂದಿಸಿದರು.

ಗದಗ ಸಮ್ಮೇಳನದ ಸಂಪೂರ್ಣ ಉಸ್ತುವಾರಿ ವಹಿಸಿಕೊಂಡಿರುವ ಕಿತ್ತೂರು ಕರ್ನಾಟಕ ಪ್ರಾದೇಶಿಕ ಪತ್ರಿಕೆಯ ಸಂಪಾದಕರು ಮತ್ತು ರಾಜ್ಯ ಉಪಾಧ್ಯಕ್ಷರಾದ ಮಂಜುನಾಥ ಬಸಪ್ಪ ಅಬ್ಬಿಗೇರಿ ಮಾತನಾಡಿ, ಸಮ್ಮೇಳನದ ಯಶಸ್ವಿಗೆ ಪೂರ್ವಸಿದ್ಧತೆಗಳು ನಡೆಯುತ್ತಿವೆ. ರಾಜ್ಯದ ಮೂಲೆ ಮೂಲೆಯಿಂದ ಬರುವ ಪತ್ರಿಕೆಗಳ ಸಂಪಾದಕರು ಮತ್ತವರ ಕುಟುಂಬದವರಿಗೆ, ವರದಿಗಾರರಿಗೆ, ಊಟ-ವಸತಿ, ಸ್ಥಳೀಯ ಸಾರಿಗೆ ಸೌಕರ್ಯ ಒದಗಿಸಲಾಗುವುದು. ಈ ಸಮ್ಮೇಳನ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಹೆಚ್.ಕೆ. ಪಾಟೀಲ್ ಅವರ ಘನ ಅಧ್ಯಕ್ಷತೆಯಲ್ಲಿ ಜರುಗಲಿರುವುದರಿಂದ ಯಾವುದೇ ಕೊರತೆಗಳಾಗದಂತೆ ಗದಗ ಜಿಲ್ಲಾ ಘಟಕ ನೋಡಿಕೊಳ್ಳಲಿದೆ ಎಂದು ಸಭೆಯಲ್ಲಿ ಭರವಸೆ ನೀಡಿದರು.

## ಭೂತಾಯಿಗೆ ಚರಗ ಚೆಲ್ಲಿದ ರೈತರು



**■ವಿಜಯಸಾಕ್ಷಿ ಸುದ್ದಿ, ಮುಳಗುಂದ**


ಇಲ್ಲಿನ ಸೊರಟೂರ ಗ್ರಾಮದಲ್ಲಿ ಸೋಮವಾರ ಎಳ್ಳ ಅಮವಾಸ್ಯೆಯನ್ನು ರೈತ ಬಾಂಧವರು ಭೂತಾಯಿಗೆ ಚರಗ ಚೆಲ್ಲುವ ಮೂಲಕ ಸಡಗರ-ಸಂಭ್ರಮದಿಂದ ಆಚರಿಸಿದರು.

ಹಿಂಗಾರು ಬೆಳೆಗಳಿಂದ ಭೂತಾಯಿ ಹಸಿರು ಉಡುಗೆಯಿಂದ ಕಂಗೊಳಿಸುತ್ತಿದ್ದು, ಸಮೃದ್ಧಿಯ ಬೆಳೆ ನೀಡು ತಾಯಿ ಎಂದು ರೈತ ಬಾಂಧವರು ಕುಟುಂಬ ಸಮೇತ ಹೊಲಗಳಿಗೆ ತೆರಳಿ ಭೂತಾಯಿಗೆ ನೈವೇದ್ಯ ಮಾಡಿ ಪಂಚ ಪಾಂಡವರ ಕಲ್ಲುಗಳಿಗೆ ಹಾಗೂ ಬನ್ನಿ ಮರಕ್ಕೆ ವಿಶೇಷ ಪೂಜೆಗೈದು ಕುಟುಂಬ ಸಮೇತ ಭೋಜನ ಮಾಡಿ ಸಂಭ್ರಮಿಸಿದರು.

## ಮೂಲಭೂತ ಸೌಕರ್ಯಕ್ಕೆ ಆಗ್ರಹಿಸಿ ಮನವಿ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಕೌಡೇಶ್ವರ ನಗರದ ನಿವಾಸಿಗಳು ಮೂಲಭೂತ ಸೌಲಭ್ಯಕ್ಕೆ ಆಗ್ರಹಿಸಿ ಸೋಮವಾರ ಪುರಸಭೆಗೆ ತೆರಳಿ, ಅಧ್ಯಕ್ಷೆ ಯಲ್ಲವ್ವ ದುರಗಣ್ಣವರ ಹಾಗೂ ಮುಖ್ಯಾಧಿಕಾರಿ ಮಹೇಶ ಹಡಪದ ಅವರಿಗೆ ಮನವಿ ಸಲ್ಲಿಸಿದರು.



ಈ ವೇಳೆ ಮಾತನಾಡಿದ ಕೌಡೇಶ್ವರ ನಗರದ ಸಾರ್ವಜನಿಕರು, ಪುರಸಭೆ ವ್ಯಾಪ್ತಿಯ ವಾರ್ಡ್ ನಂ-8ರಲ್ಲಿ ಬರುವ ಕೌಡೇಶ್ವರ ನಗರದ ನಿವಾಸಿಗಳು ಕಳೆದ 15 ವರ್ಷಗಳಿಂದ ಮೂಲಭೂತ ಸೌಲಭ್ಯಗಳಿಲ್ಲದೇ ಹತ್ತಾರು ಸಮಸ್ಯೆಗಳಿಂದ ನರಕಯಾತನೆ ಅನುಭವಿಸುತ್ತಿದ್ದೇವೆ. ತಪ್ಪದೇ ಮನೆ ತೆರಿಗೆ, ನೀರಿನ ಬಿಲ್ ತುಂಬುತ್ತಾ ಬಂದಿದ್ದೇವೆ. ಆದರೆ ಸ್ವಚ್ಛತೆ, ಚರಂಡಿ, ರಸ್ತೆ, ನೀರು ಸೇರಿದಂತೆ ಅಗತ್ಯ ಸೌಲಭ್ಯದಿಂದ ವಂತಚಿತರಾಗಿದ್ದೇವೆ. ಮಳೆ ಬಂದರೆ ಮನೆಗಳಿಗೆ ನೀರು ನುಗ್ಗುತ್ತದೆ. ರಸ್ತೆ ಮಧ್ಯದಲ್ಲಿ ನೀರು ಹರಿದು ಸದಾ ಕೆಸರಿನಿಂದ ಕೂಡಿರುತ್ತದೆ. ಈ ಬಗ್ಗೆ ಅನೇಕ ಬಾರಿ ಪುರಸಭೆ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರೂ ಯಾವುದೇ ಪ್ರಯೋಜನವಾಗಿಲ್ಲ. ಕೂಡಲೇ ಅಧಿಕಾರಿಗಳು ಸ್ಥಳಕ್ಕೆ ಬಂದು ಸಮಸ್ಯೆ ಬಗೆಹರಿಸದಿದ್ದರೆ ಪುರಸಭೆಯ ಎದುರು ಅಹೋರಾತ್ರಿ ಧರಣಿ ನಡೆಸುತ್ತೇವೆ ಎಂದು ಎಚ್ಚರಿಕೆ ನೀಡಿದರು.

ಈ ವೇಳೆ ರಾಘುಸ್ವಾಮಿ ಬನ್ನಿ, ನೀಲಪ್ಪಗೌಡ ಹೊಸಗೌಡ್ರ, ಶೇಖಪ್ಪ ಕೋರಿ, ಮಹೇಶ ಹಾದಿಮನಿ, ಸುರೇಶ ಗೊಜಗೋಜಿ, ಮಲ್ಲೇಶ ಬನ್ನಿ, ನಾಗಪ್ಪ ಕೋರಿ, ಗಿರೀಶ ಉಳ್ಳಟ್ಟಿ, ಜಯಶ್ರೀ ಕೋಷ್ಟಿ, ಪಾರವ್ವ ಬನ್ನಿ, ಬೀಬಿಜಾನ ನದಾಫ್, ಶಿದ್ದಮ್ಮ ಪೂಜಾರ, ಗಂಗಮ್ಮ ಗೊಜಗೋಜಿ, ಲಕ್ಷ್ಮವ್ವ ಕೋರಿ, ಈರವ್ವ ಕೋರಿ, ರತ್ನಮ್ಮ ಹೊಸಗೌಡ್ರ, ದ್ಯಾಮವ್ವ ಗೊಜಗೋಜಿ, ರೇಖಾ ಬನ್ನಿ ಸೇರಿದಂತೆ ಅನೇಕರು ಇದ್ದರು.

# ನರೇಗಲ್ಲದಲ್ಲಿ ಸಂಭ್ರಮದ ಎಳ್ಳ ಅಮವಾಸ್ಯೆ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ನರೇಗಲ್ಲ ಹೋಬಳಿಯಲ್ಲಿ ಸೋಮವಾರ ಎಳ್ಳ ಅಮವಾಸ್ಯೆಯನ್ನು ಸಡಗರ-ಸಂಭ್ರಮಗಳಿಂದ ಆಚರಿಸಲಾಯಿತು. ಹೊಲಕ್ಕೆ ಚರಗ ಚೆಲ್ಲುವ ಮೂಲಕ ರೈತಾಪಿ ಜನರು ತಮ್ಮ ಸ್ನೇಹಿತರು, ಬಂಧು ಮಿತ್ರರೊಂದಿಗೆ ಹೊಲಕ್ಕೆ ತೆರಳಿ ಸುಗ್ರಾಸ ಭೋಜನವನ್ನು ಉಂಡು ನಲಿದರು.



ಹೊಲದಲ್ಲಿನ ಬನ್ನಿ ಗಿಡಕ್ಕೆ ಪೂಜೆ ನೆರವೇರಿಸಿ, ತಾವು ಮಾಡಿದ ವಿವಿಧ ಬಗೆಯ ಅಡುಗೆಯನ್ನು ಹೊಲದ ತುಂಬೆಲ್ಲ ಅಡ್ಡಾಡಿ ಭೂಮಾತೆಗೆ ಅರ್ಪಿಸುವುದಕ್ಕೆ ಚರಗ ಎನ್ನುತ್ತಾರೆ. ಇದರಿಂದ ಭೂಮಿತಾಯಿ ಹುಲುಸಾಗಿ ಬೆಳೆದು ತಮಗೆ ಉತ್ತಮ ದವಸ-ಧಾನ್ಯಗಳನ್ನು ನೀಡುತ್ತಾಳೆ ಎನ್ನುವ ಬಲವಾದ ನಂಬುಗೆ ಇಲ್ಲಿನ ರೈತರಿಗಿದೆ. ಆದ್ದರಿಂದ ಹೊಲ ಇರುವ ಎಲ್ಲ ರೈತರೂ ತಪ್ಪದೆ ಈ ಚರಗವನ್ನು ಆಚರಿಸುತ್ತಾರೆ. ಅದಕ್ಕಾಗಿ ದೂರದೂರಿನ ತಮ್ಮ ಸ್ನೇಹಿತರನ್ನು, ಬಂಧು-ಬಾಂಧವರನ್ನು ಕರೆಯಿಸಿಕೊಳ್ಳುವ ಪದ್ಧತಿ ಈ ಭಾಗದಲ್ಲಿ ಇನ್ನೂ ಚಾಲ್ತಿಯಲ್ಲಿದೆ.

ಚರಗಕ್ಕೆ ಹೊರಡುವುದು ಮಧ್ಯಾಹ್ನದ ಸಮಯದಲ್ಲಾದರೂ ರೈತರ ಸಡಗರ ಬೆಳಗ್ಗಿನಿಂದಲೇ ಪ್ರಾರಂಭವಾಗಿರುತ್ತದೆ. ತಮ್ಮ ಚಕ್ಕಡಿಗಳಿದ್ದರೆ ಚಕ್ಕಡಿಗಳನ್ನು ತೊಳೆದು, ಎತ್ತುಗಳ ಮೈ ತೊಳೆದು, ಸಾಧ್ಯವಾದರೆ ಕೊಲ್ಹಾರಿ ಕಟ್ಟಿ ಹೊಲಕ್ಕೆ ಹರಡಲು ಎಲ್ಲರೂ ಸಿದ್ಧತೆ ಮಾಡಿಕೊಳ್ಳುತ್ತಾರೆ. ಇತ್ತೀಚಿನ ದಿನಗಳಲ್ಲಿ ರೈತರ ಮನೆಗಳಲ್ಲಿ ಎತ್ತು-ಚಕ್ಕಡಿಗಳ ಸಂಖ್ಯೆ ಗಣನೀಯವಾಗಿ ಕುಸಿದಿದ್ದು, ಆ ಜಾಗೆಯಲ್ಲಿ ಟ್ರಾಕ್ಟರ್, ಟಂಟಂ, ಕಾರು, ಬೈಕು ಮುಂತಾದ ವಾಹನಗಳು ಆಕ್ರಮಿಸಿಕೊಂಡಿವೆ. ತಮ್ಮದು ಯಾವುದೇ ವಾಹನವಿದ್ದರೂ ಅದನ್ನು ತೊಳೆದು ಸ್ವಚ್ಛಗೊಳಿಸಿ ಹೊಲಕ್ಕೆ ಹೊರಡಲು ಸಿದ್ಧತೆ ಮಾಡಿಕೊಳ್ಳುತ್ತಾರೆ.

ರೈತ ಮಹಿಳೆಯರ ಸಂಭ್ರಮ ಇನ್ನೊಂದು ತೆರನಾಗಿರುತ್ತದೆ. ವಿವಿಧ ಬಗೆಯ ಖಾದ್ಯಗಳನ್ನು ಮಾಡುವುದರಲ್ಲಿ ತಮ್ಮನ್ನು ತೊಡಗಿಸಿಕೊಂಡಿರುತ್ತಾರೆ. ಅಮವಾಸ್ಯೆಯ ದಿನ ಬೆಳಿಗ್ಗೆ ಬೇಗನೆ ಎದ್ದು ಅನ್ನ, ಸಾರು, ಪಲ್ಯೆ, ಕೋಸಂಬರಿ, ಕಾಳು ಇತ್ಯಾದಿ ಪದಾರ್ಥಗಳನ್ನು ಮಾಡಿ ಚರಗ ಚೆಲ್ಲಲು ಸಿದ್ಧರಾಗುತ್ತಾರೆ.

## ಸಂಭ್ರಮದ ಎಳ್ಳ ಅಮಾವಾಸ್ಯೆ ಆಚರಣೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಉತ್ತರ ಕರ್ನಾಟಕ ಭಾಗದ, ಅದರಲ್ಲೂ ಗದಗ ಜಿಲ್ಲೆಯ ತಿಮ್ಮಾಪೂರ ಗ್ರಾಮದಲ್ಲಿ ಎಳ್ಳ ಅಮಾವಾಸ್ಯೆಯ ಹಬ್ಬ ವಿಶೇಷ ಮಹತ್ವ ಪಡೆದಿದೆ. ಈ ದಿನ ಭೂತಾಯಿಗೆ ಚರಗ ಚೆಲ್ಲಿ ಸಂಭ್ರಮಿಸುವುದು ಇಲ್ಲಿಯ ಸಂಪ್ರದಾಯ.

ರೈತರು ತಮ್ಮ ಜಮೀನಿನ ಬೆಳೆಯ ಮಧ್ಯ ಇರುವ ಬನ್ನಿ ಮಹಾಕಾಳಿ ಗಿಡಕ್ಕೆ ಪೂಜೆ ಸಲ್ಲಿಸುವುದರ ಮೂಲಕ ಅಲ್ಲಿ ಐದು ಕಲ್ಲುಗಳನ್ನು ಇಟ್ಟು, ಪಾಂಡವರು ಹಾಗೂ ಇನ್ನೊಂದು ಕಲ್ಲು ಕಳ್ಳ ಎಂದು ಭಾವಿಸಿ ಪೂಜೆ ಸಲ್ಲಿಸಿ ದೇವರಿಗೆ ಉಡಿ ತುಂಬಿ, ನೈವೇದ್ಯವನ್ನು ಬೆಳೆಯಲ್ಲಿ ಎರಚಿ, ಬಂಧು-ಬಾಂಧವರೆಲ್ಲರೂ ಸಹಭೋಜನ ಸವಿದರು.

ಕರ್ನಾಟಕ ರಾಜ್ಯ ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ ತಮ್ಮ ಜಮೀನಿನಲ್ಲಿ ಕುಟುಂಬ ಸಮೇತರಾಗಿ ಭೂರಮಗೆ ಬಾಗಿನ ಅರ್ಪಿಸಿ ಬೆಳೆದ ಬೆಳೆ ಹುಲುಸಾಗಿ ಬೆಳೆದು ಉತ್ತಮ ಇಳುವರಿ ಬರಲಿ ಎಂದು ಪ್ರಾರ್ಥಿಸಿದರು.

## ಬಿಜೆಪಿಯವರು ಎಷ್ಟೇ ಚೀರಾಡಿ ಬಟ್ಟೆ ಹರಿದರೂ ರಾಜೀನಾಮೆ ನೀಡಲ್ಲ : ಪ್ರಿಯಾಂಕ್ ಖರ್ಗೆ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಬಿಜೆಪಿಯವರು ಎಷ್ಟೇ ಚೀರಾಡಲಿ, ಬಟ್ಟೆ ಹರಿದುಕೊಳ್ಳಲಿ, ನಾನು ಮಾತ್ರ ರಾಜೀನಾಮೆ ನೀಡುವ ಪ್ರಶ್ನೆಯೇ ಇಲ್ಲ ಎಂದು ಸಚಿವ ಪ್ರಿಯಾಂಕ್ ಖರ್ಗೆ ಸೋಮವಾರ ಸ್ಪಷ್ಟಪಡಿಸಿದ್ದಾರೆ. ಬೀದರ್‌ನ ಭಾಲ್ಕಿ ತಾಲ್ಲೂಕಿನ ಕಟ್ಟಿತುಗಾಂವ್ ಗ್ರಾಮದ ಗುತ್ತಿಗೆದಾರ ಸಚಿನ್ ಪಾಂಚಾಳ ಆತ್ಮಹತ್ಯೆ ಪ್ರಕರಣದಲ್ಲಿ ಪ್ರಿಯಾಂಕ್ ಖರ್ಗೆ ಹೆಸರು ಕೇಳಿಬಂದಿರುವ ಹಿನ್ನಲೆ ಅವರು ರಾಜೀನಾಮೆ ನೀಡಬೇಕು ಎಂದು ವಿಪಕ್ಷ ಬಿಜೆಪಿ ಆಗ್ರಹಿಸಿತ್ತು.



ಈ ಬಗ್ಗೆ ಬೆಂಗಳೂರಿನಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿರುವ ಪ್ರಿಯಾಂಕ್ ಖರ್ಗೆ, "ಎಷ್ಟೇ ಚೀರಾಡಿಕೊಳ್ಳಲಿ, ಬಟ್ಟೆ ಹರಿದುಕೊಳ್ಳಲಿ ರಾಜೀನಾಮೆ ನೀಡುವ ಪ್ರಶ್ನೆಯೇ ಇಲ್ಲ ಎಂದು ನಾನು ಈ ಹಿಂದೆಯೂ ಹೇಳಿದ್ದೇನೆ. ಮೊದಲು ಸಾಕ್ಷಿ ತೋರಿಸಿ ನಂತರ ಮಾತನಾಡಲಿ. ಸುಮ್ಮನೆ ಗಾಳಿಯಲ್ಲಿ ಗುಂಡು ಹಾರಿಸಿದಂತೆ ಮಾತನಾಡುವುದಲ್ಲ" ಎಂದು ಹೇಳಿದ್ದಾರೆ. ಬಿಜೆಪಿಯವರು ಎಷ್ಟೇ

"ಡಿಸೆಂಬರ್ 27ರಂದೇ ಗೃಹ ಸಚಿವರು, ಸಿಎಂಗೆ ಮನವಿ ಮಾಡಿದ್ದೇನೆ. ಈ ಪ್ರಕರಣದಲ್ಲಿ ಸ್ವತಂತ್ರ ತನಿಖೆ ಆಗಲಿ ಎಂದು ಹೇಳಿದ್ದೆ. ಸಿಎಂ ಭೇಟಿ ಮಾಡಿ ಮಾಹಿತಿ ನೀಡಿದ್ದೇನೆ, ಗೃಹ ಸಚಿವರನ್ನೂ ಕೂಡ ಭೇಟಿ ಮಾಡಿದ್ದೇನೆ. ರಾಜು ಕಪನೂರ್ ನನ್ನ ಆಪ್ತನಲ್ಲ ಎಂದು ನಾನು ಎಲ್ಲಿಯೂ ಹೇಳಿಲ್ಲ. ಬಿಜೆಪಿ ನಾರ್ತ್ ಅಭ್ಯರ್ಥಿ ಚಂದು ಪಾಟೀಲ್ ಜೊತೆಗೆ ರಾಜು ಕಪನೂರ್ ಇರುವ ಫೋಟೋ ನಮ್ಮ ಬಳಿಯೂ ಇದೆ. ಯಾಕೆಂದರೆ ಅವರು ಕಾಂಗ್ರೆಸ್‌ಗೆ ಬರುವ ಮುನ್ನ ಬಿಜೆಪಿಯಲ್ಲಿದ್ದರು. ರಾಜು ಕಪನೂರ್ ಬಿಜೆಪಿ ಎಸ್ ಸಿ ಮೋರ್ಚಾ ಅಧ್ಯಕ್ಷರಾಗಿದ್ದರು" ಎಂದು ಅವರು ಹೇಳಿದ್ದಾರೆ.

## ಚರಗ ಚೆಲ್ಲಿ ಸಂಭ್ರಮಿಸಿದ ರೈತ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯ ರೋಣ ತಾಲೂಕಿನ ಮುಗಳಿ ಗ್ರಾಮದಲ್ಲಿ ರೈತರಾದ ದೇವಪ್ಪ ರಂಗಪ್ಪ ಕಾಶಪ್ಪನವರ ಇವರ ಹೊಲದಲ್ಲಿ ಸಂಭ್ರಮದಿಂದ ಎಳ್ಳು ಅಮಾವಾಸ್ಯೆಯನ್ನು ಭೂ ತಾಯಿಗೆ ಚರಗ ಚೆಲ್ಲುವ ಮೂಲಕ ಆಚರಿಸಿದರು.



ಎಳ್ಳು ಅಮಾವಾಸ್ಯೆ ಉತ್ತರ ಕರ್ನಾಟಕ ಅದರಲ್ಲೂ ಗದಗ ಜಿಲ್ಲೆಯಲ್ಲಿ ಭೂತಾಯಿಗೆ ಸೀಮಂತ ಕಾರ್ಯ ಮಾಡಿ ಪೂಜೆ ಸಲ್ಲಿಸುವ ಮೂಲಕ ಹಬ್ಬ ಆಚರಿಸುತ್ತಾರೆ.

ಈ ಹಬ್ಬಕ್ಕೆ ಶತಮಾನಗಳ ಇತಿಹಾಸವಿದೆ. ವರ್ಷಾನುಗಟ್ಟಲೇ ಸಮಸ್ಯೆಗಳ ಸರಮಾಲೆಯಲ್ಲಿ ಬಳಲಿದ ರೈತರು ಈ ಹಬ್ಬದ ದಿನ ಅದನ್ನು ಮರೆತು ಸಂತಸದ ಕ್ಷಣಗಳನ್ನು ಅನುಭವಿಸಿದರು. ರೈತರನ್ನು ಸದಾ ಕಾಪಾಡುವ ಭೂ ತಾಯಿಗೆ ನಮಿಸಿ ಪುನೀತರಾದರು.

# ಕುವೆಂಪು ಜಗದ, ಯುಗದ ಕವಿ

▶▶ ಮೊದಲನೇ ಪುಟದಿಂದ

ಕುವೆಂಪು ಅವರು ಸಮಾಜಕ್ಕೆ ನೀಡಿದ ಚಿಂತನೆ, ಆದರ್ಶ, ಮೌಲ್ಯಗಳನ್ನು ಬದುಕಿನಲ್ಲಿ ಅಳವಡಿಸಿಕೊಂಡು ಜಾತಿ-ಬೇಧ ಮರೆತು ಸ್ನೇಹ, ಸೌಹಾರ್ದತೆ, ಭ್ರಾತೃತ್ವದಿಂದ ಬಾಳೋಣ. ಅಂದಾಗ ಮಾತ್ರ ಮನುಜ ಮತ-ವಿಶ್ವಪಥದ ಅವರ ಚಿಂತನೆ ಮತ್ತು ವಿಶ್ವಮಾನವ ದಿನಾಚರಣೆ ಅರ್ಥಪೂರ್ಣವಾಗುತ್ತದೆ ಎಂದರು.

ಸರಕಾರಿ ಪ್ರೌಢಶಾಲೆ ಯಲ್ಲಾಪುರದ ಶಿಕ್ಷಕ ಎಂ.ಎಚ್. ದಿಂಡವಾಡ ಮಾತನಾಡಿ, ಕುವೆಂಪುರವರಿಲ್ಲದ ಕನ್ನಡವನ್ನು ಕಲ್ಪಿಸಿಕೊಳ್ಳಲೂ ಸಾಧ್ಯವಿಲ್ಲ ಎಂದು ಅಭಿಪ್ರಾಯಪಟ್ಟರು. ಸಮಾಜ ಕಲ್ಯಾಣ ಇಲಾಖೆಯ ಎಚ್.ಎಂ. ಅರಳಿಹಳ್ಳಿ ಮಾತನಾಡಿದರು. ಸಾಹಿತ್ಯ ಪರಿಷತ್ತಿನ ಸಲಹಾ ಸಮಿತಿಯ ಹಿರಿಯರಾದ ಎಸ್.ಐ. ಆಲೂರ ಅಧ್ಯಕ್ಷೀಯ ನುಡಿಗಳನ್ನು ಆಡಿದರು.

ಕಾರ್ಯಕಾರಿ ಸಮಿತಿಯ ಸದಸ್ಯ ಹೆಚ್.ಎಂ. ಗುತ್ತಲ ಸ್ವಾಗತಿಸಿದರು. ಕ.ಸಾ.ಪ ಸಂಘಟನಾ ಕಾರ್ಯದರ್ಶಿ ನಾಗರಾಜ ಮಜ್ಜಿಗುಡ್ಡ ಕಾರ್ಯಕ್ರಮ ನಿರೂಪಿಸಿದರು. ಸಲಹಾ ಸಮಿತಿಯ ಹಿರಿಯ ಸದಸ್ಯ ಎಸ್.ಬಿ. ಅಣ್ಣಿಗೇರಿ ವಂದಿಸಿದರು.

ಅತಿಥಿಗಳು ಗಣ್ಯರು ಹಾಗೂ ವಿದ್ಯಾರ್ಥಿಗಳೆಲ್ಲರೂ ಸೇರಿ ನಾಡಗೀತೆಯನ್ನು ಹಾಡಿದರು. ಸಮಾಜ ಕಲ್ಯಾಣ ಇಲಾಖೆಯ ಸಿದ್ದಣ್ಣ ಕಳಸಣ್ಣವರ ಹಾಗೂ ಪದವಿಪೂರ್ವ, ಪದವಿ ಕಾಲೇಜಿ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಸಿಎಂ ಆದಿತ್ಯನಾಥ್ ಮನೆಯ ಅಡಿಯಲ್ಲಿ ಶಿವಲಿಂಗ : ಅಖಿಲೇಶ್ ಯಾದವ್

■ ವಿಜಯಸಾಕ್ಷಿ ಸುದ್ದಿ, ಉತ್ತರ ಪ್ರದೇಶ

ಉತ್ತರ ಪ್ರದೇಶದ ಮುಖ್ಯಮಂತ್ರಿ ಆದಿತ್ಯನಾಥ್ ಅವರ ಲಕ್ನೋದ ಅಧಿಕೃತ ನಿವಾಸದ ಅಡಿಯಲ್ಲಿ ಶಿವಲಿಂಗವಿದೆ ಎಂದು ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್ ಅವರು ಹೇಳಿದ್ದು, "ಅಲ್ಲಿಯೂ ಅಗೆಯಿರಿ" ಎಂದು ತಿಳಿಸಿದ್ದಾರೆ. ಸಿಎಂ ಆದಿತ್ಯನಾಥ್

ಸಂಭಾಲ್ ಸೇರಿದಂತೆ ಹಲವೆಡೆ ನಡೆಸಲಾಗಿರುವ ಸಮೀಕ್ಷೆಯ ಬಗ್ಗೆ ಮಾಧ್ಯಮಕ್ಕೆ ಪ್ರತಿಕ್ರಿಯೆ ನೀಡಿರುವ ಅವರು, "ಬಿಜೆಪಿ ಸರ್ಕಾರವು ತನ್ನ ವೈಫಲ್ಯವನ್ನು ಮರೆಮಾಚಲು ಮತ್ತು ಸಮಸ್ಯೆಗಳಿಂದ ಜನರ ಗಮನವನ್ನು ಬೇರೆಡೆಗೆ ಸೆಳೆಯುವ ನಿಟ್ಟಿನಲ್ಲಿ ವಿವಿಧ ಸ್ಥಳಗಳಲ್ಲಿ ಭೂಮಿಯನ್ನು ಅಗೆಯುತ್ತಿದೆ" ಎಂದು ಆರೋಪಿಸಿದ್ದಾರೆ.

### ಎಸ್ಎಸ್ಎಲ್ಸಿ ವಿದ್ಯಾರ್ಥಿಗಳಿಗೆ ಹಮ್ಮಿಕೊಳ್ಳಲಾಗಿದ್ದ ಕಾರ್ಯಾಗಾರದಲ್ಲಿ ಶಾಸಕ ಡಾ. ಚಂದ್ರು ಲಮಾಣಿ

# ನೀವೇ ನಿಮ್ಮ ಭವಿಷ್ಯದ ರೂವಾರಿಗಳು

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಎಸ್ಎಸ್ಎಲ್ಸಿ ಪರೀಕ್ಷೆಯಲ್ಲಿ ಗಳಿಸುವ ಯಶಸ್ಸು ಮುಂದಿನ ಶೈಕ್ಷಣಿಕ ಜೀವನಕ್ಕೆ ಮಾರ್ಗದರ್ಶಿಯಾಗಲಿದೆ. ನಿಮ್ಮ ಉಜ್ವಲ ಭವಿಷ್ಯದ ರೂವಾರಿಗಳೂ ನೀವೇ ಆಗಿದ್ದು, ಅನಗತ್ಯ ಯೋಚನೆಗಳಿಂದ ಹೊರ ಬಂದು ಶ್ರದ್ಧೆಯಿಂದ ಮನಸ್ಸನ್ನು ಓದಿನತ್ತ ಕೇಂದ್ರೀಕರಿಸಬೇಕು ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಸೋಮವಾರ ಪಟ್ಟಣದ ಸವಣೂರ ರಸ್ತೆಯ ಬಿಸಿಎನ್ ಪಿಯು ಮತ್ತು ಡಿಗ್ರಿ ಕಾಲೇಜಿನಲ್ಲಿ ಶಾಲಾ ಶಿಕ್ಷಣ ಇಲಾಖೆ ಸಹಯೋಗದಲ್ಲಿ ಎಸ್ಎಸ್ಎಲ್ಸಿ ವಿದ್ಯಾರ್ಥಿಗಳಿಗೆ ಹಮ್ಮಿಕೊಳ್ಳಲಾಗಿದ್ದ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಮಕ್ಕಳ ಭವಿಷ್ಯದ ಬಗ್ಗೆ ತಂದೆ-ತಾಯಿಗಳು ಬೆಟ್ಟದಷ್ಟು ಆಸೆ-ಕನಸು ಕಟ್ಟಿಕೊಂಡು ಹಗಲಿರುಳು ದುಡಿಯುತ್ತಾರೆ. ಅದನ್ನು ಅರ್ಥೈಸಿಕೊಂಡು ಹೆತ್ತವರ ಆಸೆ ತೀರಿಸುವ ನಿಟ್ಟಿನಲ್ಲಿ ದೃಢ ಹೆಜ್ಜೆ ಇಡಬೇಕು. ಪಾಠಾಭ್ಯಾಸ ಮುಗಿಸಿ ಪರೀಕ್ಷೆ ಓದಲು ರಜೆ ಕೊಡದೇ ಶಾಲೆಯಲ್ಲಿಯೇ ಓದುವ ಅವಕಾಶ ಕಲ್ಪಿಸಬೇಕು. ಅದಕ್ಕಾಗಿ ಪೂರಕ ವಾತಾವರಣ, ಮೇಲ್ವಿಚಾರಣೆ, ಮಾರ್ಗದರ್ಶನ ಮಾಡಬೇಕು. ಅವರ ಆಸೆ, ಕನಸಿಗೆ ನೀವು ಚಿಗುರಾಗಬೇಕು. ವಿದ್ಯಾರ್ಥಿಗಳು ಅತ್ಯಮೂಲ್ಯವಾದ ಸಮಯ ವ್ಯರ್ಥಮಾಡದೇ ಶಿಕ್ಷಕರ ಮಾರ್ಗದರ್ಶನದಲ್ಲಿ ಓದಬೇಕು. ಕಳೆದ ವರ್ಷ ಎಸ್ಎಸ್ಎಲ್ಸಿ ಪರೀಕ್ಷೆ ಫಲಿತಾಂಶದಲ್ಲಿ ಗದಗ ಜಿಲ್ಲೆಯ ಸ್ಥಾನ 17ಕ್ಕಿದ್ದು, ಈ ವರ್ಷ ಒಂದಂಕಿಯೊಳಗಾದರೂ ಬರಬೇಕು ಎಂದು ಆಶಿಸಿದರು.




ಬಿಸಿಎನ್ ಶಿಕ್ಷಣ ಸಂಸ್ಥೆ ನಿರ್ದೇಶಕ ಲೋಹಿತ ನೆಲವಿಗಿ ಸಾವಿರಾರು ವಿದ್ಯಾರ್ಥಿಗಳಿಗೆ ಪರೀಕ್ಷಾ ಪೂರಕ ಸ್ಪಡಿ ಮಟೀರಿಯಲ್ ಉಚಿತವಾಗಿ ವಿತರಿಸಿ ಮಾತನಾಡಿ, ಎಸ್ಎಸ್ಎಲ್ಸಿ ವಿದ್ಯಾರ್ಥಿಗಳ ಶೈಕ್ಷಣಿಕ ಸಾಧನೆಗೆ ಕಾರ್ಯಾಗಾರಗಳು ಪೂರಕವಾಗಿವೆ. ಶಿಕ್ಷಕರು ಪಾಠ ಮಾಡುವುದು ಎಷ್ಟು ಮುಖ್ಯವೋ, ವಿದ್ಯಾರ್ಥಿಗಳು ನಿರಂತರ ಓದಿ ಸಾಧನೆ ಮಾಡುವುದೂ ಅಷ್ಟೇ ಮುಖ್ಯ. ವಿದ್ಯಾರ್ಥಿಗಳು ತಮ್ಮಲ್ಲಿನ ಕೀಳರಿಮೆ ಬಿಟ್ಟು, ಋಣಾತ್ಮಕವಾಗಿ ಯೋಚಿಸದೇ ನಾನು ಮಾಡಬಲ್ಲೆ ಎಂಬ ಆತ್ಮವಿಶ್ವಾಸದಿಂದ ಅಭ್ಯಾಸದಲ್ಲಿ ತೊಡಗಿಸಿಕೊಳ್ಳಬೇಕು.

ಪರೀಕ್ಷೆಯಲ್ಲಿ ಉತ್ತಮ ಅಂಕ ಗಳಿಸುವವರೆಗೂ ಶೈಕ್ಷಣಿಕ ಸಾಧನೆಗೆ ಅಡ್ಡಿಯಾಗಲಿರುವ ಮೋಬೈಲ್, ಟಿವಿ ಬಳಸುವುದಿಲ್ಲ ಎಂಬ ದೃಢ ಸಂಕಲ್ಪ ವಿದ್ಯಾರ್ಥಿಗಳದ್ದಾಗಬೇಕು. ಬರುವ ಎಸ್ಎಸ್ಎಲ್ಸಿ ಪರೀಕ್ಷೆಯಲ್ಲಿ ಶೇ. 98ರಷ್ಟು ಫಲಿತಾಂಶ ಗಳಿಸಿದ ವಿದ್ಯಾರ್ಥಿಗಳಿಗೆ ಬಿಸಿಎನ್ ವಿಜನ್ ಪಿಯೂ ಕಾಲೇಜಿನಲ್ಲಿ ಉಚಿತ ಪ್ರವೇಶ ಕಲ್ಪಿಸಲಾಗುವುದು. ಪಿಯುಸಿಯಲ್ಲಿ ಶೇ.95 ಅಂಕಗಳಿಸುವ ವಿದ್ಯಾರ್ಥಿಗೆ ಬಿಸಿಎನ್ ವಿಜನ್ ಪದವಿ ಕಾಲೇಜನಲ್ಲಿ ಪ್ರವೇಶ ಮತ್ತು ಸ್ಕಾಲರ್‌ಶಿಪ್ ನೀಡಲಾಗುವುದು ಎಂದರು.

ಬಿಇಓ ನಾಣಕಿ ನಾಯ್ಕ ಮಾತನಾಡಿ, ಎಸ್ಎಸ್ಎಲ್ಸಿ ಪರೀಕ್ಷೆಯ ಫಲಿತಾಂಶ ಹೆಚ್ಚಿಸುವ ನಿಟ್ಟಿನಲ್ಲಿ ಶೈಕ್ಷಣಿಕ ವರ್ಷಾರಂಭದಿಂದಲೇ ಅಧಿಕಾರಿಗಳು, ಶಿಕ್ಷಕರು ವಿದ್ಯಾರ್ಥಿಗಳಿಗಾಗಿ ಹಲವು ಪರಿಣಾಮಕಾರಿ ವಿಧಾನ, ವಿನೂತನ ಯೋಜನೆಗಳನ್ನು ಕೈಗೊಳ್ಳಲಾಗಿದೆ. ವಿಷಯ ತಜ್ಞರ ಮೂಲಕ ತರಬೇತಿ, ಪ್ರೇರಣಾ ಕಾರ್ಯಾಗಾರಗಳನ್ನು ಹಮ್ಮಿಕೊಳ್ಳಲಾಗಿದೆ. ಎಲ್ಲರ ಪರಿಶ್ರಮಕ್ಕೆ ತಕ್ಕಂತೆ ವಿದ್ಯಾರ್ಥಿಗಳು ಓದಿ ಜಿಲ್ಲೆಗೆ ಉತ್ತಮ ಫಲಿತಾಂಶವನ್ನು ನೀಡಬೇಕು ಎಂದ ಅವರು, ಬಿಸಿಎನ್ ಶಿಕ್ಷಣ ಸಂಸ್ಥೆಯ ಶಿಕ್ಷಣ ಸೇವೆ ಶ್ಲಾಘಿಸಿದರು.

ವಿಜ್ಞಾನ, ಇಂಗ್ಲಿಷ್, ಗಣಿತ ವಿಷಯ ಶಿಕ್ಷಕರಾದ ಶೇಖರ ಚಿಕ್ಕಣ್ಣವರ, ಸಿ.ಎಫ್. ಜೋಗಿನ, ಸಿದ್ದಲಿಂಗೇಶ ಹಲಸೂರ ಕಾರ್ಯಾಗಾರ ನಡೆಸಿಕೊಟ್ಟರು. ನೋಡಲ್ ಅಧಿಕಾರಿ ಉಮೇಶ ಹುಚ್ಚಯ್ಯನಮಠ, ಬಿಸಿಎನ್ ವಿಜನ್ ಕಾಲೇಜಿನ ಪ್ರಾಚಾರ್ಯ ಮಂಜುನಾಥ ಬಂಡಿವಾಡ, ಬಿಆರ್‌ಸಿ ಹಾಗೂ ಕಾರ್ಯಕ್ರಮ ಸಂಯೋಜಕ ಈಶ್ವರ ಮೆಡ್ಲೇರಿ, ಎಂ.ಎಂ. ಹವಳದ, ಎಲ್.ಎಸ್. ಅರಳಹಳ್ಳಿ ಸೇರಿ ಬಿಆರ್‌ಪಿ, ಬಿಆರ್‌ಸಿ, ಮುಖ್ಯ ಶಿಕ್ಷಕರು ಹಾಜರಿದ್ದರು.

ಒಟ್ಟು 23 ಶಾಲೆಯಿಂದ 1053 ವಿದ್ಯಾರ್ಥಿಗಳು, 76 ಶಿಕ್ಷಕರು ಪಾಲ್ಗೊಂಡಿದ್ದರು. ಬಸವರಾಜ ಶೆಟ್ಟರ, ರಾಜಶೇಖರ ಸ್ವಾಮಿ, ಗಿರೀಶ ಬಸರೆಡ್ಡಿ ಕಾರ್ಯಕ್ರಮ ನಿರೂಪಿಸಿದರು.

ಸಂಪನ್ಮೂಲ ಶಿಕ್ಷಕಿ, ಎನ್ಎಲ್‌ಪಿ ಮಾಸ್ಟರ್ ಟ್ರೇನರ್ ನಂದಾ ಹಂಪಿಹೊಳಿ ಅವರು ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ ತುಂಬುವ ಮಾತುಗಳನ್ನಾಡಿ, ವಿದ್ಯಾರ್ಥಿಗಳು ಇಂಗ್ಲೀಷ್, ವಿಜ್ಞಾನ ಮತ್ತು ಗಣಿತವನ್ನು ಕಬ್ಬಿಣದ ಕಡಲೆ ಎಂದು ಭಾವಿಸದೇ ಹೆಚ್ಚಿನ ವೇಳೆಯನ್ನು ಈ ವಿಷಯಗಳಿಗೆ ಮೀಸಲಿರಿಸಿಕೊಳ್ಳಿ. ಶಿಕ್ಷಕರು ಮತ್ತು ಸಹಪಾಠಿಗಳೊಂದಿಗೆ ಚರ್ಚಿಸಿ ವಿಷಯ ಮನನ ಮಾಡಿಕೊಳ್ಳಬೇಕು. ಅತ್ಯಮೂಲ್ಯವಾದ ಸಮಯ ಕಳೆದು ಹೋದರೆ ಮರಳಿಬಾರದೆಂಬ ಸತ್ಯ ಅರಿತು ಅಧ್ಯಯನ ವೇಳಾಪಟ್ಟಿ ರಚಿಸಿಕೊಂಡು ಶ್ರದ್ಧೆಯಿಂದ ಹೆಚ್ಚು ಸಮಯದ ಓದುವುದು ಮತ್ತು ಓದಿದ ವಿಚಾರ ಮನನ ಮಾಡಿಕೊಂಡು ಪರೀಕ್ಷೆಗೆ ಸನ್ನದ್ಧರಾಗಬೇಕು ಎಂದರು.

# ಸೂಕ್ತ ಪರಿಹಾರ ಒದಗಿಸಲು ಆಗ್ರಹ




■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಇತ್ತೀಚೆಗೆ ಹುಬ್ಬಳ್ಳಿಯಲ್ಲಿ ಸಿಲಿಂಡರ್ ಸ್ಫೋಟದಿಂದ 6 ಜನ ಅಯ್ಯಪ್ಪ ಮಾಲಾಧಾರಿಗಳು ಮರಣ ಹೊಂದಿದ್ದು, ಇವರ ಕುಟುಂಬಕ್ಕೆ ಸೂಕ್ತ ಪರಿಹಾರ ಒದಗಿಸಬೇಕೆಂದು ಸೋಮವಾರ ಶಿರಹಟ್ಟಿಯಲ್ಲಿ ಶ್ರೀ ಅಯ್ಯಪ್ಪಸ್ವಾಮಿ ಮಾಲಾಧಾರಿಗಳ ಭಕ್ತ ವೃಂದದಿಂದ ತಹಸೀಲ್ದಾರರ ಮೂಲಕ ಸಿಎಂ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಅಯ್ಯಪ್ಪ ಮಾಲಾಧಾರಿ ಸಂತೋಷ ಕುರಿ, ಹುಬ್ಬಳ್ಳಿಯಲ್ಲಿ ಅಯ್ಯಪ್ಪಸ್ವಾಮಿ ಸನ್ನಿಧಾನದಲ್ಲಿ ಪೂಜೆ ಮುಗಿಸಿ ಮಲಗಿದ ಸಂದರ್ಭದಲ್ಲಿ ಗ್ಯಾಸ್ ಸಿಲಿಂಡರ್ ಸ್ಫೋಟದಿಂದ ಸ್ಥಳದಲ್ಲಿ ಮಲಗಿದ್ದ 6 ಮಾಲಾಧಾರಿ ಸ್ವಾಮಿಗಳು ಗಾಯಗೊಂಡು ಮರಣ ಹೊಂದಿದ್ದು, ಈ ಕುಟುಂಬಗಳು ತುಂಬಾ ಬಡತನದಲ್ಲಿವೆ. ಆದ್ದರಿಂದ ಪ್ರತಿ ಕುಟುಂಬಕ್ಕೆ 25 ಲಕ್ಷ ರೂ ಪರಿಹಾರಧನ ಒದಗಿಸಬೇಕು, ಜೊತೆಗೆ ಧಾರ್ಮಿಕ ದತ್ತಿ ಇಲಾಖೆಯು ಸಹಾಯಧನ ನೀಡಬೇಕೆಂದು ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಹನಮಂತ ಪವಾರ, ಚಂದ್ರು ಜೋಗೇರ, ಪ್ರವೀಣ ಘಂಟಿ, ಮನೋಜ ಭಜಂತ್ರಿ, ಮಲ್ಲು ಬೋರಶೆಟ್ಟರ, ಮಲ್ಲಪ್ಪ ಕುದರಿ, ಆನಂದ ಘಂಟಿ, ಗೌಡಪ್ಪ ಪಾಟೀಲ, ಮಂಜು ಕಲಾಲ, ಪ್ರಶಾಂತ ಗಾಯಕವಾಡ, ಮಹಾಂತೇಶ ಚಲವಾದಿ ಮುಂತಾದವರು ಉಪಸ್ಥಿತರಿದ್ದರು.

# ಮಾದಾರ ಚನ್ನಯ್ಯನವರ ಜಯಂತ್ಯುತ್ಸವ ಆಚರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಮಾದಿಗ ಸಂಘರ್ಷ ಸಮಿತಿ ವತಿಯಿಂದ ಆದ್ಯ ವಚನಕಾರ ಶ್ರೀ ಶಿವಶರಣ ಮಾದಾರ ಚನ್ನಯ್ಯನವರ ಜಯಂತಿಯನ್ನು ಆಚರಿಸಲಾಯಿತು.

ಈ ಸಂಧರ್ಭದಲ್ಲಿ ಮಾದಿಗ ಸಮಾಜದ ಹಿರಿಯರು ಹಾಗೂ ನಗರಸಭೆಯ 16ನೇ ವಾರ್ಡಿನ ಸದಸ್ಯರಾದ ಕೃಷ್ಣಾ ಪರಾಪೂರ ಮಾತನಾಡಿ, ಶತಮಾನಗಳಿಂದ ಮಾದಿಗ ಜನಾಂಗವು ಅನ್ಯಾಯ, ತುಳಿತಕ್ಕೆ ಒಳಗಾಗಿದ್ದು, ನಮ್ಮ ಮಾದಿಗ ಜನಾಂಗಕ್ಕೆ ಹಕ್ಕುಗಳು ಹಾಗೂ ಮೀಸಲಾತಿಯಂತಹ ಸೌಲಭ್ಯಗಳು ದೊರಕಬೇಕಾದರೆ ಮಾದಾರ ಚನ್ನಯ್ಯನವರ ಜಯಂತಿಯನ್ನು ಆಚರಿಸಲೇಬೇಕು ಎಂದು ತಿಳಿಸಿದರು.

ಗೋವಿಂದರಾಜ ಬಳ್ಳಾರಿ ಮಾತನಾಡಿ, ಶಿವ ಭಕ್ತರಾಗಿದ್ದ ಮಾದಾರ ಚೆನ್ನಯ್ಯ, ದೇವರಿಗೆ ಅಂಬಲಿ ಉಣಿಸಿದ ಪ್ರಸಂಗ ಅವನ ಉಜ್ವಲ ಭಕ್ತಿಗೆ ಉದಾಹರಣೆ. ಇದೇ ಕಾರಣಕ್ಕೆ ಬಸವಣ್ಣವರು ಮಾದಾರ ಚೆನ್ನಯ್ಯರವರನ್ನು ಹೃದಂತರಾಂತರಾಳದಿಂದ ಸ್ತುತಿಸಿದ್ದಾರೆ.

ಮಾದಾರ ಚೆನ್ನಯ್ಯ ಶ್ರೇಷ್ಠ ವಚನಕಾರ. ತನ್ನ ವಚನಗಳಿಗೆ ಯಾವುದೇ ಅಂಕಿತನಾಮವನ್ನು ಬಳಸಿಕೊಂಡಿಲ್ಲ ಎಂದು ತೀಳಿಸಿದರು.

ಯುವರಾಜ ಬಳ್ಳಾರಿ ಮಾತನಾಡಿ, ಮಾದಾರ ಚೆನ್ನಯ್ಯರವರ ವಚನಗಳಲ್ಲಿ ಕುಲ ಕೇಂದ್ರವಾಗಿದೆ.

ಅವರ ವಿಚಾರ ಧಾರೆಗಳು ಬಸವಾದಿ ಶರಣರ ಕ್ರಾಂತಿಗೆ ಮೂಲ ಬೀಜಗಳು ಎಂದು ತೀಳಿಸಿದರು.

ಈ ಸಂದರ್ಭದಲ್ಲಿ ಅಶೋಕ ಕುಡಿತಿನಿ, ವೆಂಕಟೇಶ ಬಳ್ಳಾರಿ, ಮಾರುತಿ ಬಳ್ಳಾರಿ, ಪರಶುರಾಮ ಸಂಗಾಪೂರ, ವಿಶಾಲ ಗೋಷಾಲನವರ, ಪೃಥ್ವಿ ಪರಾಪೂರ, ನಾಗರಾಜ ಕಿನ್ನಾರಿ, ಸುಂಕಪ್ಪಾ ಗುತ್ತಿ, ಮಹೇಶ ನಾನಬಾಲ, ನಾರಾಯಣ ದೊಡ್ಡಮನಿ, ಹುಸೇನ ಮಲ್ಲಸಮುದ್ರ, ರಾಮಚಂದ್ರ ಬಳ್ಳಾರಿ, ನಿತಿನ ಬಳ್ಳಾರಿ, ವರ್ಧನ ತೌಜುಲ್, ಪವನ ಬಳ್ಳಾರಿ, ಪ್ರಜ್ವಲ್ ಯಟ್ಟಿ ಮುಂತಾದವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ರಾಜ್ಯ ಹೆದ್ದಾರಿ ದುರಸ್ತಿಗೆ ಆಗ್ರಹ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ಪಟ್ಟಣಕ್ಕೆ ಸಂಪರ್ಕ ಕಲ್ಪಿಸುವ ಗದಗ-ಹೊನ್ನಾಳಿ ರಾಜ್ಯ ಹೆದ್ದಾರಿ ಕಾಮಗಾರಿಯ ಸಂದರ್ಭದಲ್ಲಿ ಭಾರೀ ವಾಹನಗಳ ಸಂಚಾರದಿಂದ ರಸ್ತೆಗಳೆಲ್ಲ ಹಾಳಾಗಿದ್ದು, ತಕ್ಷಣವೇ ರಸ್ತೆಗಳನ್ನು ದುರಸ್ತಿ ಮಾಡಬೇಕೆಂದು ಪಟ್ಟಣ ಪಂಚಾಯಿತಿ ಮಾಜಿ ಅಧ್ಯಕ್ಷ ನಾಗರಾಜ ಲಕ್ಕುಂಡಿ ಸೇರಿದಂತೆ ಸಾರ್ವಜನಿಕರು ಸೋಮವಾರ ತಹಸೀಲ್ದಾರರ ಮೂಲಕ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ನಾಗರಾಜ ಲಕ್ಕುಂಡಿ, ಶಿರಹಟ್ಟಿ ಪಟ್ಟಣಕ್ಕೆ ಒಳಬರುವ ರಸ್ತೆಗಳಲ್ಲಿ ಗದಗ-ಹೊನ್ನಾಳಿ ರಾಜ್ಯ ಹೆದ್ದಾರಿ ಕಾಮಗಾರಿ ಮಾಡುವ ಸಂದರ್ಭದಲ್ಲಿ ಭಾರೀ ವಾಹನಗಳ ಸಂಚಾರದಿಂದ ರಸ್ತೆಗಳೆಲ್ಲ ಹಾಳಾಗಿ ಹೋಗಿದ್ದು, ಲಘುವಾಹನ ಸೇರಿದಂತೆ ಬೈಕ್ ಸವಾರರ ಸಂಚಾರಕ್ಕೆ ತೊಂದರೆಯಾಗುತ್ತಿದೆ. ಇದರಿಂದ ಅಪಘಾತಗಳು ಸಹ ಆಗುತ್ತಿವೆ. ಈ ಬಗ್ಗೆ ರಾಜ್ಯ ಹೆದ್ದಾರಿ ಇಲಾಖೆಗೆ ಮೌಖಿಕವಾಗಿ ಹಾಗೂ ಲಿಖಿತವಾಗಿ ತಿಳಿಸಿದರೂ ಯಾವುದೇ ಕ್ರಮ ಕೈಕೊಂಡಿಲ್ಲ. ಈ ರಸ್ತೆಗಳ ಡಾಂಬರೀಕರಣ ಕಾರ್ಯ ಮಾಡುವ ಜವಾಬ್ದಾರಿ ರಾಜ್ಯ ಹೆದ್ದಾರಿ ನಿರ್ಮಾಣ ಮಾಡುತ್ತಿರುವ ಇಲಾಖೆಯದ್ದಾಗಿದೆ. ಸಂಬಂಧಪಟ್ಟ ಇಲಾಖೆಗೆ ಸೂಚಿಸಿ ರಸ್ತೆ ಡಾಂಬರೀಕರಣ ಮಾಡಿಸಿಕೊಡಬೇಕು ಎಂದು ವಿನಂತಿಸಿದರು.

ಬಿಜೆಪಿ ಜಿಲ್ಲಾ ಪ್ರ.ಕಾರ್ಯದರ್ಶಿ ಫಕ್ಕೀರೇಶ ರಟ್ಟಿಹಳ್ಳಿ, ತಾ.ಪಂ ಮಾಜಿ ಅಧ್ಯಕ್ಷ ಜಾನು ಲಮಾಣಿ, ಗೂಳಪ್ಪ ಕರಿಗಾರ, ಅಕ್ಬರಸಾಬ ಯಾದಗಿರಿ, ಮಲ್ಲು ಕಬಾಡಿ, ವಿನೋದ ಕಪ್ಪತ್ತನವರ, ಮಂಜುನಾಥ ಬಳಿಗಾರ, ಮಲ್ಲು ಕುದುರೆ, ತಿಪ್ಪಣ್ಣ ಲಮಾಣಿ, ವೀರಣ್ಣ ಅಂಗಡಿ, ಗಿರೀಶ ತುಳಿ, ಸಂತೋಷ ಕುಬೇರ, ಯಲ್ಲಪ್ಪ ಖಾನಾಪೂರ, ಬಸವರಾಜ ವಡವಿ ಮುಂತಾದವರು ಉಪಸ್ಥಿತರಿದ್ದರು.

# ಚರಗ ಚೆಲ್ಲಿ ಸಂಭ್ರಮಿಸಿದ ಅನ್ನದಾತ

■ ವಿಜಯಸಾಕ್ಷಿ ಸುದ್ದಿ, ರೋಣ

ತಾಲೂಕಿನಾದ್ಯಾಂತ ಅನ್ನದಾತರು ಸೋಮವಾರ ತಮ್ಮ ಬಂಧು-ಬಳಗದವರೊಂದಿಗೆ ಜಮೀನುಗಳಿಗೆ ತೆರಳಿ ಭೂ ತಾಯಿಗೆ ನಮಿಸಿ, ಸಂಭ್ರಮದಿಂದ ಚರಗ ಚೆಲ್ಲಿದರು.

ಎಳ್ಳ ಅಮವಾಸೆಯ ವಾರದ ಹಿಂದೆ ವಿವಿಧ ರಿತಿಯ ಸಿಹಿ ತಿನಿಸುಗಳನ್ನು ತಯಾರಿಸುವ ರೈತ ಮಹಿಳೆಯರು ಚರಗ ಚೆಲ್ಲಲು ಅಣಿಯಾಗುತ್ತಾರೆ. ಜಾತಿ-ಧರ್ಮಗಳ ಜಂಜಾಟಗಳಿಲ್ಲದೆ ಎಲ್ಲರೂ ಕೂಡಿಕೊಂಡು ಆಚರಿಸುವ ಹಬ್ಬ ಎಳ್ಳ ಅಮವಾಸ್ಯೆಯಾಗಿದ್ದು, ಬಿತ್ತನೆ ಮಾಡಿದ ಜಮೀನುಗಳಿಗೆ ತೆರಳುವ ಕೃಷಿಕರು ಬೆಳೆಗಳನ್ನು ನೊಡಿ ಹರ್ಷಗೊಳ್ಳುತ್ತಾರೆ. ಅಲ್ಲದೆ ಬೆಳೆಗಳು ಹುಲುಸಾಗಿ ಬರಲಿ ಎಂದು ಪಾಂಡವರನ್ನು ರಚಿಸಿ, ಪೂಜೆ ಸಲ್ಲಿಸಿ, ಬೆಳೆದ ಬೆಳೆ ಕೈಗೆ ಬರಲಿ ಎಂದು ಪ್ರಾರ್ಥಿಸುತ್ತಾರೆ.

ನಂತರ ಹಬ್ಬಕ್ಕೆ ಆಗಮಿಸಿದ ಬಂಧುಗಳು, ಸ್ನೇಹಿತರು ಹಾಗೂ ಅಕ್ಕ ಪಕ್ಕದ ಜಮೀನುಗಳ ರೈತರು ಸೇರಿಕೊಂಡು ಹಬ್ಬದೂಟ ಸವಿಯುತ್ತಾರೆ. ಜಮೀನುಗಳಿಗೆ ತೆರಳುವ ಮುನ್ನ ಎತ್ತಿನ ಬಂಡಿಗಳು ಸೇರಿದಂತೆ ವಾಹನಗಳನ್ನು ಸಿಂಗರಿಸಿಕೊಂಡು ಹೊಗುವುದು ಹಬ್ಬಕ್ಕೆ ಮತ್ತಷ್ಟು ಮೆರಗು ನೀಡುತ್ತದೆ.



# ಸತತ 6ನೇ ಅವಧಿಗೆ ಅವಿರೋಧ ಆಯ್ಕೆ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿಯ ಹಾಲು ಉತ್ಪಾದಕರ ಸಹಕಾರಿ ಸಂಘಕ್ಕೆ ಸತತ 6ನೇ ಅವಧಿಗೆ ಜಿಲ್ಲಾ ಪಂಚಾಯತ ಮಾಜಿ ಅಧ್ಯಕ್ಷ ವಿಶ್ವನಾಥ ಕಪ್ಪತ್ತನವರ ಅವಿರೋಧವಾಗಿ ಅಧ್ಯಕ್ಷ ಸ್ಥಾನಕ್ಕೆ ಆಯ್ಕೆಯಾಗಿದ್ದಾರೆ.

ಈ ಕುರಿತು ಪತ್ರಿಕೆಯೊಂದಿಗೆ ಮಾತನಾಡಿದ ವಿಶ್ವನಾಥ ಕಪ್ಪತ್ತನವರ, ಶಿರಹಟ್ಟಿ ಪಟ್ಟಣದಲ್ಲಿ 1987-88ನೇ ಸಾಲಿನಲ್ಲಿ ಸಂಘವು ಪ್ರಾರಂಭವಾಗಿದ್ದು, 1995ರಲ್ಲಿ ನಡೆದ ಚುನಾವಣೆಯಲ್ಲಿಯೂ ಸಹ ಅವಿರೋಧವಾಗಿ ಅಧ್ಯಕ್ಷ ಸ್ಥಾನಕ್ಕೆ ಆಯ್ಕೆಯಾಗಿದ್ದೆ. ಅಲ್ಲಿಂದ ಇಲ್ಲಿಯವರೆಗೂ ಎಲ್ಲ ಸದಸ್ಯರ ಸಹಕಾರದಿಂದ 6ನೇ ಅವಧಿಗೂ ಸಹ ಅಧ್ಯಕ್ಷನಾಗಿದ್ದು, ಈ ಅವಧಿಯಲ್ಲಿ ಸಂಘದ ಶ್ರೇಯೋಭಿವೃದ್ಧಿಗೆ ಸರಕಾರದಿಂದ ಅನುದಾನ ತರಲಾಗಿದೆ. ಜೊತೆಗೆ ಬಿಎಂಸಿ ಘಟಕ, ಪ್ರತಿ ವಾರವೂ ಉತ್ಪಾದಕರಿಗೆ ಹಣ ಬಟವಡೆ, ಪ್ರತಿ ವರ್ಷವೂ ಹಾಲು ಉತ್ಪಾದಕರಿಗೆ ಬೋನಸ್ ಹಾಗೂ ಡಿವಿಡೆಂಡ್ ವಿತರಿಸಲಾಗುತ್ತಿದೆ. ಕೆಎಂಎಫ್ ಇತಿಹಾಸದಲ್ಲಿಯೇ 6ನೇ ಅವಧಿಗೆ ಅವಿರೋಧವಾಗಿ ಅಧ್ಯಕ್ಷ ಚುನಾವಣೆ ನಡೆದಿದ್ದು, ಇತರ ಸಂಘಗಳಿಗೆ ನಮ್ಮ ಸಂಘವು ಮಾದರಿಯಾಗಿದೆ ಎಂದರು. ಉಪಾಧ್ಯಕ್ಷರಾಗಿ ಚಂದ್ರ ಜಿಡಗಣ್ಣವರ ಅವಿರೋಧವಾಗಿ ಆಯ್ಕೆಯಾದರು. ಈ ಸಂದರ್ಭದಲ್ಲಿ ಸಂದೀಪ ಕಪ್ಪತ್ತನವರ, ನಿಂಗಪ್ಪ ತುಳಿ, ವೀರಪ್ಪ ಕಲ್ಯಾಣಿ, ಶರಣಪ್ಪ ಅಕ್ಕಿ, ಗೌಸಪೀರ ಮಕಾನದಾರ, ವಿಜಯಲಕ್ಷ್ಮೀ ಬಂತಿ, ಸಾವಿತ್ರಿ ನವಲಿ, ಶಾಂತವ್ವ ತಳವಾರ, ಶಿವಾನಂದ ಕುರಿ, ಶಂಕ್ರಪ್ಪ ವರವಿ, ವ್ಯವಸ್ಥಾಪಕ ಸುರೇಶ ವರವಿ ಮುಂತಾದವರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka